ಸಂಪುಟ : 9 ಸಂಚಿಕೆ 28 ಪುಟ : 4 ಬೆಲೆ : 3.00 ಮಂಗಳವಾರ ಫೆಬ್ರವರಿ 27, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 28 Pages : 4 Price : 3.00 Tuesday February 27 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## 'ಯುವನಿಧಿ' ಪ್ರತಿ ತಿಂಗಳು ಸ್ವಯಂ ಘೋಷಣೆ ಕಡ್ಡಾಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ 'ಯುವನಿಧಿ'ಯಲ್ಲಿ ಪದವಿ, ಸ್ನಾತಕೊತ್ತರ ಪದವಿ ಮತ್ತು ಡಿಪ್ಲೊಮಾಗಳನ್ನು 2022-23ನೇ ಶೈಕ್ಷಣಿಕ ವರ್ಷದಲ್ಲಿ ವ್ಯಾಸಂಗ ಮಾಡಿ 2023ರಲ್ಲಿ ತೇರ್ಗಡೆಯಾಗಿ ಅರ್ಹತೆ ಹೊಂದಿದ ಅಭ್ಯರ್ಥಿಗಳು ಈಗಾಗಲೇ ಸೇವಾಸಿಂಧು ಪೋರ್ಟಲ್‌ನಲ್ಲಿ ನೋಂದಣಿಯಾಗಿದ್ದು ಹಾಗೂ ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ 2024ರಂದು ನೇರ ನಗದು ವರ್ಗಾವಣೆ ಮಾಡಲಾಗಿರುತ್ತದೆ.

ಅಭ್ಯರ್ಥಿಗಳು ಈ ಪ್ರಯೋಜನವನ್ನು ಪ್ರತಿ ತಿಂಗಳು ಪಡೆಯಬೇಕಿದ್ದರೆ, ಪ್ರತಿ ಮಾಹೆಯಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿಯಲ್ಲವೆಂದು ಸ್ವಯಂ ಘೋಷಣೆಯನ್ನು ಮಾಡಬೇಕಾಗಿರುತ್ತದೆ. ಪ್ರಸಕ್ತ ಫೆಬ್ರವರಿ ಮಾಹೆಯಲ್ಲಿ 29-02-2024ರವರೆಗೆ ಸೇವಾಸಿಂಧು ಪೋರ್ಟಲ್‌ನಲ್ಲಿ ಸ್ವಯಂ ಘೋಷಣೆ ಪ್ರಮಾಣಪತ್ರವನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಪ್ರಯೋಜನ ಪಡೆಯುತ್ತಿರುವ ಅರ್ಹ ಅಭ್ಯರ್ಥಿಗಳು ಪ್ರತಿ ತಿಂಗಳು ಸ್ವಯಂ ಘೋಷಣೆ ಮಾಡದಿದ್ದಲ್ಲಿ ಅಂತಹ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆಯನ್ನು ಮಾಡಲಾಗುವುದಿಲ್ಲ. ಈಗಾಗಲೇ ನೋಂದಾಯಿಸಿಕೊಂಡ ಅಭ್ಯರ್ಥಿಗಳಿಗೆ ಜನವರಿಯಲ್ಲಿ ನೇರ ನಗದು ವರ್ಗಾವಣೆ ಮಾಡಲಾಗಿದ್ದು, ಮುಂದಿನ ತಿಂಗಳು ಪ್ರಯೋಜನ ಪಡೆದುಕೊಳ್ಳಲು ಸ್ವಯಂ ಘೋಷಣೆ ಮಾಡಬೇಕಾಗಿರುವ ಕುರಿತು ಎಸ್‌ಎಂಎಸ್ ಸಂದೇಶವನ್ನು ಅಭ್ಯರ್ಥಿಗಳಿಗೆ ರವಾನಿಸಲಾಗಿರುತ್ತದೆ.

ಅಭ್ಯರ್ಥಿಗಳು ಕಡ್ಡಾಯವಾಗಿ ಆಧಾರ್ ಸೀಡೆಡ್ ಬ್ಯಾಂಕ್ ಖಾತೆಯನ್ನು ಹೊಂದಿರಬೇಕು. ಅಭ್ಯರ್ಥಿಗಳು ಸ್ವಯಂ ಘೋಷಣೆ ಮಾಡಿಕೊಳ್ಳಲು https://sevasindhugs.karnataka.gov.in ವೆಬ್‌ಸೈಟ್ ವೀಕ್ಷಿಸಬಹುದು. ಹೆಚ್ಚಿನ ವಿವರಗಳಿಗೆ ದೂ.ಸಂಖ್ಯೆ 080-25189112 ಸಂಪರ್ಕಿಸಬಹುದು ಎಂದು ಎಂದು ಕೈಗಾರಿಕಾ ತರಬೇತಿ ಹಾಗೂ ಉದ್ಯೋಗ ಇಲಾಖೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಮ ನಿರ್ದೇಶಿತ ಸದಸ್ಯರಾಗಿ ಸಾಂಗ್ಲೀಕರ ನೇಮಕ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ



ಪಟ್ಟಣದ ಪುರಸಭೆ ಸದಸ್ಯ ರಾಜು ಸಾಂಗ್ಲೀಕರ ಅವರನ್ನು ಗಜೇಂದ್ರಗಡ ತಾಲೂಕಿನ ಸಮುದಾಯ ಆರೋಗ್ಯ ರಕ್ಷಾ ಸಮಿತಿಗೆ ನಾಮ ನಿರ್ದೇಶಿತ ಸದಸ್ಯರನ್ನಾಗಿ ಸರ್ಕಾರದಿಂದ ನೇಮಕ ಮಾಡಲಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಅಣ್ಣಿಗೇರಿ, ನವಲಗುಂದ ತಾಲೂಕಿನಲ್ಲಿ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಅಣ್ಣಿಗೇರಿಯ 110 ಕೆವ್ಹಿ ವಿದ್ಯುತ್ ಉಪಕೇಂದ್ರದಲ್ಲಿ ನಾಲ್ಕನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಕೈಗೊಳ್ಳುವುದರಿಂದ ಫೆಬ್ರವರಿ 28 ರಂದು ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜುವಿನಲ್ಲಿ ವ್ಯತ್ಯಯ ಉಂಟಾಗಲಿದೆ. ಗ್ರಾಹಕರು ಹೆಸ್ಕಾಂನೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

ನಲವಡಿ, ಭದ್ರಾಪುರ, ಕೋಳಿವಾಡ, ಅಣ್ಣಿಗೇರಿ, ಹಳ್ಳಿಕೇರಿ, ಮಜ್ಜಿಗುಡ್ಡ, ಕೊಂಡಿಕೊಪ್ಪ ಹಾಗೂ ಸುತ್ತಮುತ್ತಲಿನ ಪ್ರದೇಶಗಳು.

ನವಲಗುಂದದ 110 ಕೆವ್ಹಿ ವಿದ್ಯುತ್ ಉಪಕೇಂದ್ರದಲ್ಲಿ ನಾಲ್ಕನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿಯನ್ನು ಕೈಗೊಳ್ಳುವುದರಿಂದ ಫೆಬ್ರವರಿ 28 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ನವಲಗುಂದ, ಅಳಗವಾಡಿ, ಯಮನೂರ, ಶಾನವಾಡ, ಕುಮಾರಕೊಪ್ಪ, ಇಬ್ರಾಹಿಂಪುರ, ಕಡದಳ್ಳಿ, ಅಮರಗೋಳ, ಸೊಟಕನಾಳ , ಶಲವಡಿ, ಬಳ್ಳೂರು ಹಾಗೂ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ. ಗ್ರಾಹಕರು ಹೆಸ್ಕಾಂನೊಂದಿಗೆ ಸಹಕರಿಸಬೇಕೆಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶ ಸ್ಥಳ ವೀಕ್ಷಿಸಿದ ಜಿಲ್ಲಾಧಿಕಾರಿ

# ಅನಾನುಕೂಲಗಳಾಗದಂತೆ ಕ್ರಮವಹಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

ಫೆ.29ರಂದು ಸರಕಾರದ ಗ್ಯಾರಂಟಿ ಯೋಜನೆಯ ಫಲಾನುಭವಿಗಳ ಸಮಾವೇಶಕ್ಕೆ ಆಗಮಿಸುವ ನಾಗರಿಕರ ಹಿತದೃಷ್ಟಿಯಿಂದ ಕುಡಿಯುವ ನೀರು ಹಾಗೂ ಆಹಾರ ವಿತರಣೆ ಸಂದರ್ಭದಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಬಾರದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಸೂಚಿಸಿದರು.

ಅವರು ಸೋಮವಾರ ತಹಸೀಲ್ದಾರ್ ಕಚೇರಿಯ ಸಭಾಂಗಣದಲ್ಲಿ ನಡೆದ ತಾಲೂಕಾ ಮಟ್ಟದ ಅಧಿಕಾರಿಗಳ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.



ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶದಲ್ಲಿ 20 ಸಾವಿರಕ್ಕೂ ಹೆಚ್ಚು ಜನರು ಆಗಮಿಸುವ ನಿರೀಕ್ಷೆಯಿದೆ. ಯಾವುದೇ ಕಾರಣಕ್ಕೂ ಯಾರಿಗೂ ಸಹ ತೊಂದರೆಯಾಗಬಾರದು. ಮುಖ್ಯವಾಗಿ ಸಂಚಾರಕ್ಕೆ ಅನಾನುಕೂಲವಾಗಬಾರದು ಎಂದ ಅವರು, ಸಮಾವೇಶಕ್ಕೆ ಬರುವ ವಾಹನಗಳನ್ನು ಬೇರೆ ಕಡೆ ನಿಲ್ಲಿಸಲು ಅವಕಾಶ ಕಲ್ಪಿಸಬೇಕು ಎಂದು ತಿಳಿಸಿದರು.

ಸರಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳ ಬಗ್ಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಫಲಾನುಭವಿಗಳಿಗೆ ಮಾಹಿತಿಯನ್ನು ಒದಗಿಸುವ ಕಾರ್ಯವನ್ನು ಸಮಾವೇಶದಲ್ಲಿ ಮಾಡಬೇಕು. ನರೆಗಲ್ಲ, ರೋಣ, ಗಜೇಂದ್ರಗಡ ಪಟ್ಟಣಗಳ ಪುರಸಭೆಯ ಮುಖ್ಯಾಧಿಕಾರಿಗಳು ತಮ್ಮ ಗ್ರಾಮಗಳಲ್ಲಿ ಸಮಾವೇಶದ ಕುರಿತು ಸಾರ್ವಜನಿಕರಿಗೆ ಧ್ವನಿವರ್ಧಕದ ಮೂಲಕ ಪ್ರಚಾರ ಮಾಡಬೇಕು. ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಸೂಚಿಸಿದರು.

ಸಭೆಯ ನಂತರ ಜಿಲ್ಲಾಧಿಕಾರಿಗಳು ಸಮಾವೇಶ ನಡೆಯುವ ಸ್ಥಳವನ್ನು ವೀಕ್ಷಿಸಿ ಮಾಹಿತಿ ಪಡೆದರು.

ತಹಸೀಲ್ದಾರ್ ನಾಗರಾಜ ಕೆ., ಇಓಗಳಾದ ರವಿ ಎ.ಎನ್., ಡಿ ಮೋಹನ್, ಪಿಎಸ್‌ಐ ಎಲ್.ಕೆ. ಜೂಲಕಟ್ಟಿ, ಜಗದೀಶ ಮಡಿವಾಳ, ಗಿರೀಶ ಹೊಸುರ, ರವೀಂದ್ರ ಪಾಟೀಲ, ಬಲರಾಮ್ ನಾಯ್ಕರ, ಮೀನಾ ರತ್ನಾಕರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

**ಮಾಧ್ಯಮದವರಿಗೆ ತೊಂದರೆಯಾಗದಂತೆ ನಿಗಾ ವಹಿಸಿ**

ಕಳೆದ ಬಾರಿ ರೋಣದಲ್ಲಿ ಪಲಾನುಭವಿಗಳ ಸಮಾವೇಶವನ್ನು ಹಮ್ಮಿಕೊಂಡಾಗ ಮಾಧ್ಯಮ ಪ್ರತಿನಿಧಿಗಳಿಗೆ ತೊಂದರೆಯಾಗಿತ್ತು. ಅಂತಹ ಘಟನೆಗಳು ಮತ್ತೆ ಮರುಕಳಿಸಬಾರದು. ಅಲ್ಲದೆ ಮಾಧ್ಯಮದವರಿಗೆ ಮೀಸಲಾಗಿರುವ ಸ್ಥಳದಲ್ಲಿ ಯಾರನ್ನೂ ಬಿಡಬೇಡಿ. ಸರಕಾರಿ ಕಾರ್ಯಕ್ರಮವಾಗಿದ್ದರಿಂದ ಯಶಸ್ವಿಯಾಗಿ ನಡೆಯಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

### 'ಕಾರ್ಮಿಕ ಕಲ್ಯಾಣ ರಥ'ಕ್ಕೆ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಚಾಲನೆ

# ಅರ್ಹರಿಗೆ ಸರ್ಕಾರದ ಸೌಲಭ್ಯಗಳು ತಲುಪಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಮಿಕ ಇಲಾಖೆಯಿಂದ ಕಾರ್ಮಿಕರಿಗೆ ಇರುವ ಸೌಲಭ್ಯಗಳು ಹಾಗೂ ಅವುಗಳನ್ನು ಸದುಪಯೋಗ ಪಡಿಸಿಕೊಳ್ಳುವ ಕುರಿತಂತೆ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಈ ಜಾಗೃತಿ ಅಭಿಯಾನದ ಸದುಪಯೋಗವನ್ನು ಕಾರ್ಮಿಕರು ಪಡೆದುಕೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ನುಡಿದರು.

ಜಿಲ್ಲಾಡಳಿತ ಭವನದ ಆವರಣದಲ್ಲಿ ಕಾರ್ಮಿಕ ಇಲಾಖೆಯಿಂದ ಏರ್ಪಡಿಸಲಾಗಿದ್ದ ಕಾರ್ಮಿಕ ಕಲ್ಯಾಣ ಜಾಗೃತಿ ರಥ-ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ಜಿಲ್ಲಾ ಕಾರ್ಮಿಕ ಅಧಿಕಾರಿ ಬಿ.ಆರ್. ಜಾಧವ ಮಾತನಾಡಿ, ಎಲ್‌ಇಡಿ ಪರದೆಯುಳ್ಳ ವಾಹನದ ಮೂಲಕ ನೋಂದಾಯಿತ ಕಾರ್ಮಿಕರಿಗೆ ಇರುವ ಸೌಲಭ್ಯಗಳ ಕುರಿತು ಅರಿವು ಮೂಡಿಸಲಾಗುತ್ತಿದೆ. ಗದಗ ಜಿಲ್ಲೆಯಲ್ಲಿ ಒಟ್ಟು 1,06,000 ಕಾರ್ಮಿಕರು ನೋಂದಾಯಿಸಿಕೊಂಡಿದ್ದಾರೆ. ಅನರ್ಹ ಕಾರ್ಮಿಕರನ್ನು ಗುರುತಿಸಿ ನಕಲಿ ಗುರುತಿನ ಚೀಟಿಯನ್ನು ಹಿಂಪಡೆಯಲು ಅಭಿಯಾನವನ್ನು ಸಹ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಈಗಾಗಲೇ 3 ಸಾವಿರಕ್ಕೂ ಅಧಿಕ ಅನರ್ಹ ಕಾರ್ಮಿಕರ ನೋಂದಣಿಯನ್ನು ರದ್ದುಪಡಿಸಲಾಗಿದೆ. ನಕಲಿ ಗುರುತಿನ ಚೀಟಿ ಹಿಂದಿರುಗಿಸಿ ನೋಂದಣಿಯನ್ನು ರದ್ದುಪಡಿಸಿಕೊಳ್ಳಿ ಎಂಬ ಅಭಿಯಾನವನ್ನು ಜಿಲ್ಲಾದ್ಯಂತ ಪರಿಣಾಮಕಾರಿಯಾಗಿ ಮಾಡಲಾಗುತ್ತಿದೆ.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ 60 ವರ್ಷ ಮೇಲ್ಪಟ್ಟ ಫಲಾನುಭವಿಗಳಿಗೆ ಮಾಸಿಕ ಪಿಂಚಣಿ ಸೌಲಭ್ಯ ನೀಡಲಾಗುತ್ತಿದೆ. ಕುಟುಂಬ ಪಿಂಚಣಿ ಸೌಲಭ್ಯ, ದುರ್ಬಲತೆ ಪಿಂಚಣಿ, ಟೂಲ್ ಕಿಟ್ ಸೌಲಭ್ಯ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ, ಶೈಕ್ಷಣಿಕ ಸಹಾಯಧನ, ವೈದ್ಯಕೀಯ ಸಹಾಯ ಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ಸಹಾಯ ಧನ, ಮದುವೆ ಸಹಾಯ ಧನ, ತಾಯಿ-ಮಗು ಸಹಾಯ ಹಸ್ತ ಹೀಗೆ ಕಾರ್ಮಿಕ ಇಲಾಖೆಯಿಂದ ಹತ್ತು ಹಲವಾರು ಸೌಲಭ್ಯಗಳನ್ನು ಸರ್ಕಾರ ಕಾರ್ಮಿಕರಿಗೆ ಒದಗಿಸುತ್ತಾ ಬಂದಿದ್ದು, ಅರ್ಹರು ನೋಂದಣಿ ಮಾಡಿಕೊಳ್ಳಬೇಕು. ಅನರ್ಹ ಕಾರ್ಮಿಕರು ತಮ್ಮ ನೋಂದಣಿಯನ್ನು ತಾವೇ ರದ್ದು ಪಡಿಸಿಕೊಳ್ಳಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಕಾರ್ಮಿಕ ನೀರಿಕ್ಷಕರು, ವಾರ್ತಾಧಿಕಾರಿ ವಸಂತ ಮಡ್ಲೂರ, ಕಾರ್ಮಿಕ ಇಲಾಖೆಯ ಸಂದೇಶ ಪಾಟೀಲ ಸೇರಿದಂತೆ ಇತರರು ಇದ್ದರು.

ಅನರ್ಹ ಕಾರ್ಮಿಕರು ನಕಲಿ ಗುರುತಿನ ಚೀಟಿಯನ್ನು ಹಿಂದಿರುಗಿಸಿ ನೋಂದಣಿಯನ್ನು ರದ್ದು ಪಡಿಸಿಕೊಳ್ಳಬೇಕು. ಅರ್ಹರಿಗೆ ಸರ್ಕಾರದ ಸೌಲಭ್ಯಗಳು ತಲುಪಲಿ. ಕಟ್ಟಡ ಕಾರ್ಮಿಕರಲ್ಲದವರು ನಕಲಿ ದಾಖಲೆಗಳನ್ನು ಸಲ್ಲಿಸಿ ನೋಂದಣಿಯಾಗುವದು ಮತ್ತು ಸೌಲಭ್ಯಗಳನ್ನು ಪಡೆಯುವದು ಶಿಕ್ಷಾರ್ಹ ಅಪರಾಧವಾಗಿದ್ದು, ಕಾನೂನು ಪ್ರಕಾರ ಕಾರ್ಮಿಕ ಇಲಾಖೆಯಿಂದ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ. ಹೇಳಿದರು.

### ಗಾಣಿಗ ಸಮುದಾಯದ ನೂತನ ಸಮುದಾಯ ಭವನ ಕಟ್ಟಡ ನಿರ್ಮಾಣದ ಭೂಮಿಪೂಜೆ

# ಜಿ.ಎಸ್. ಪಾಟೀಲರಂತಹ ಸೃಜನಶೀಲರು ವಿರಳ

■ವಿಜಯಸಾಕ್ಷಿ ಸುದ್ದಿ, ರೋಣ

ಸರ್ವ ಸಮುದಾಯಗಳನ್ನು ಏಕತೆಯಿಂದ ಕಾಣುವ ಹಾಗೂ ಕೊಟ್ಟ ಮಾತಿನಂತೆ ನಡೆದುಕೊಳ್ಳುವ ಶಾಸಕ ಜಿ.ಎಸ್. ಪಾಟೀಲರ ಕೈಯನ್ನು ಸಮಾಜದ ಬಂಧುಗಳು ಬಿಡಬೇಡಿ ಎಂದು ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕ ಲಕ್ಷ್ಮಣ ಸವದಿ ಹೇಳಿದರು.

ಅವರು ರೋಣ ತಾಲೂಕಾ ಗಾಣಿಗ ಸಮುದಾಯದ ನೂತನ ಸಮುದಾಯ ಭವನ ಕಟ್ಟಡ ನಿರ್ಮಾಣದ ಭೂಮಿಪೂಜೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.




ರೋಣ ತಾಲೂಕಿನ ಗಾಣಿಗ ಸಮುದಾಯ ಭವನ ನಿರ್ಮಿಸಲು ಮುಂದಾಗಿರುವುದು ಸಂತಸ ತಂದಿದೆ. ಅಲ್ಲದೆ ಶಾಸಕ ಜಿ.ಎಸ್. ಪಾಟೀಲರು ಈಗಾಗಲೇ 1 ಕೋಟಿ ರೂ.ಗಳ ಅನುದಾನವನ್ನು ಒದಗಿಸಿದ್ದು, ಮೊದಲ ಹಂತದ 25 ಲಕ್ಷ ರೂ.ಗಳು ಸಮುದಾಯಕ್ಕೆ ಬಂದಿರುವುದು ಅಭಿನಂದನಾರ್ಹ. ಮುಖ್ಯವಾಗಿ ಕಟ್ಟಡ ನಿರ್ಮಾಣಕ್ಕೆ 3 ಕೋಟಿಗೂ ಹೆಚ್ಚಿನ ಹಣ ಬೇಕಿದ್ದು, ನಾನು ಸಹ ವಯಕ್ತಿಕವಾಗಿ ಭವನ ನಿರ್ಮಾಣಕ್ಕೆ 25 ಲಕ್ಷರೂಗಳನ್ನು ನೀಡುತ್ತೇನೆ ಎಂದು ಭರವಸೆ ನೀಡಿದರು.

ಶಾಸಕ ಜಿ.ಎಸ್. ಪಾಟೀಲರು ಅತ್ಯಂತ ಪ್ರಭಾವಿ ನಾಯಕರು. ಗಾಣಿಗ ಸಮುದಾಯ ಸೇರಿದಂತೆ ಎಲ್ಲ ಸಮುದಾಯದವರ ಏಳ್ಗೆಯನ್ನು ಬಯಸುವ ವ್ಯಕ್ತಿಯಾಗಿದ್ದಾರೆ. ರಾಜಕಾರಣದಲ್ಲಿ ಇಂತಹ ಸೃಜನಶೀಲ ವ್ಯಕ್ತಿಗಳು ವಿರಳ. ಹೀಗಾಗಿ, ಕ್ಷೇತ್ರದ ಜನರು ಜಿ.ಎಸ್. ಪಾಟೀಲರಂತಹ ವ್ಯಕ್ತಿಯ ಕೈ ಬಿಡಬಾರದು ಎಂದ ಅವರು, ಮುಂದಿನ ದಿನಗಳಲ್ಲಿ ರೋಣ ಮತಕ್ಷೇತ್ರ ಅಭಿವೃದ್ಧಿಯತ್ತ ಸಾಗಲಿದೆ ಎಂದು ಆಶಾಭಾವನೆಯನ್ನು ವ್ಯಕ್ತಪಡಿಸಿದರು.

ಜಯಬಸವ ಕುಮಾರ ಶ್ರೀಗಳು, ಗುರುಪಾದ ಶ್ರೀಗಳು, ಮುಪ್ಪಿನ ಬಸವಲಿಂಗ ಶ್ರೀಗಳು, ಗಂಗಾಧರ ಶ್ರೀಗಳು, ಸದಾಶಿವ ಮಹಾಂತ ಶಿವಾಚಾರ್ಯರು ಸಾನ್ನಿಧ್ಯ ವಹಿಸಿದ್ದರು. ದಶರಥ ಗಾಣಿಗೇರ, ಹುಚ್ಚಪ್ಪ ನವಲಗುಂದ, ಬಸವರಾಜ ನವಲಗುಂದ, ಬಸವರಾಜ ಬಿಂಗಿ, ಪರಶುರಾಮ ಅಳಗವಾಡಿ, ಸಿದ್ದಣ್ಣ ಬಂಡಿ, ಬಿ.ಎಸ್. ಸುಂಕದ, ವಿ.ಬಿ. ಸೋಮನಕಟ್ಟಿಮಠ, ಯೂಸುಪ್ ಇಟಗಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು

ಶಾಸಕ ಜಿ.ಎಸ್. ಪಾಟೀಲ ಮಾತನಾಡಿ, ನನ್ನ ರಾಜಕೀಯ ಜೀವನದಲ್ಲಿ ಗಾಣಿಗ ಸಮುದಾಯ ಸೇರಿದಂತೆ ಎಲ್ಲ ಸಮುದಾಯದವರೂ ಬೆಂಬಲಿಸಿದ್ದಾರೆ. ಸರ್ವ ಸಮುದಾಯಗಳ ಹಿತ ಕಾಯುವುದು ನನ್ನ ಮೊದಲ ಆದ್ಯತೆಯಾಗಿದೆ. ಸಮುದಾಯ ಭವನ ನಿರ್ಮಾಣಕ್ಕೆ ಮತ್ತಷ್ಟು ಅಗತ್ಯ ನೆರವು ನೀಡಲಾಗುವುದು. ಸಮುದಾಯದ ಸಹಾಯಹಸ್ತ ಕೂಡ ಮುಖ್ಯವಾಗಿದೆ ಎಂದರು.

## ನಿಲಯ್ ವಿಪಿನ್ ಚಂದ್ರ ಅಂಜಾರಿಯಾರಿಗೆ ಸಚಿವ ಎಚ್.ಕೆ. ಪಾಟೀಲರಿಂದ ಅಭಿನಂದನೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಧೀಶರಾಗಿ ಅಧಿಕಾರ ವಹಿಸಿಕೊಂಡ ನಿಲಯ್ ವಿಪಿನ್ ಚಂದ್ರ ಅಂಜಾರಿಯಾ ಅವರ ಅಧಿಕಾರ ಪ್ರಮಾಣವಚನ ಸ್ವೀಕಾರ ಕಾರ್ಯಕ್ರಮದಲ್ಲಿ ಕಾನೂನು, ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ ಪಾಲ್ಗೊಂಡರು.

ಪ್ರಮಾಣವಚನ ಬೋಧಿಸಲು ಆಗಮಿಸಿದ ರಾಜ್ಯಪಾಲರಾದ ಥಾವರ್ ಚಂದ್ ಗೆಹಲೋಟ್ ಅವರೊಂದಿಗೆ ಸಚಿವರು ಮಾತುಕತೆ ನಡೆಸಿದರು. ನೂತನ ನ್ಯಾಯಮೂರ್ತಿಗಳಾಗಿ ನೇಮಕಗೊಂಡಿರುವ ನಿಲಯ್ ವಿಪಿನ್ ಚಂದ್ರ ಅಂಜಾರಿಯಾ ಅವರನ್ನು ಅಭಿನಂದಿಸಿ, ಶುಭಕಾಮನೆಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವಾರು ಗಣ್ಯರು ಉಪಸ್ಥಿತರಿದ್ದರು.

## ಸಂಪಾದಕೀಯ

### ಉದ್ಯೋಗ ಮೇಳ; ನಿಖರ ದತ್ತಾಂಶ ಸಂಗ್ರಹಣೆ ಅಗತ್ಯ

ರಾಜ್ಯ ಸರ್ಕಾರದ ಎರಡು ದಿನಗಳ ಕಾಲ ಬೆಂಗಳೂರಿನಲ್ಲಿ ಉದ್ಯೋಗ ಮೇಳ ಆಯೋಜಿಸಿದೆ. ಒಂದು ಲಕ್ಷ ಯುವಕರಿಗೆ ಉದ್ಯೋಗ ಕೊಡುವ ಗುರಿಯೊಂದಿಗೆ ಸರ್ಕಾರ ಈ ಮೇಳವನ್ನ ಆಯೋಜಿಸಿದೆ. ಮೊದಲ ದಿನವೇ 75,000 ಯುವಕರು ಈ ಮೇಳದಲ್ಲಿ ಉದ್ಯೋಗಕ್ಕಾಗಿ ನೋಂದಣಿ ಮಾಡಿಕೊಂಡಿದ್ದಾರೆ.

ಸರ್ಕಾರ ಒಂದು ಲಕ್ಷ ಉದ್ಯೋಗ ಸೃಷ್ಟಿಯ ಗುರಿ ಇಟ್ಟುಕೊಂಡಿರುವುದು ಒಳ್ಳೆಯ ಬೆಳವಣಿಗೆ. ಜೊತೆಗೆ ಸ್ಥಳದಲ್ಲಿಯೇ ನೇಮಕಾತಿ ಪತ್ರವನ್ನು ಕೊಡಬೇಕು ಎನ್ನುವ ನಿಯಮಗಳನ್ನು ಕಂಪನಿಗಳಿಗೆ ವಿಧಿಸಿರುವುದು ಸಹ ಸ್ವಾಗತಾರ್ಹ ನಡೆಯೆ. ಉದ್ಯೋಗ ಮೇಳದ ಎರಡನೇ ದಿನವೂ ಸಾವಿರಾರು ಜನ ನೋಂದಣಿ ಮಾಡಿಕೊಳ್ಳುವ ನಿರೀಕ್ಷೆ ಇದೆ.

ಇಂತಹ ಉದ್ಯೋಗ ಮೇಳವನ್ನು ಪ್ರತಿ ಜಿಲ್ಲಾ ಕೇಂದ್ರಗಳಲ್ಲೂ ಆಯೋಜಿಸಿ, ಸ್ಥಳೀಯ ಮಟ್ಟದಲ್ಲಿ ಉದ್ಯೋಗದಾತರಿಗೆ ಮತ್ತು ಉದ್ಯೋಗ ಆಕಾಂಕ್ಷಿಗಳಿಗೆ ವೇದಿಕೆ ಕಲ್ಪಿಸುವ ಚಿಂತನೆಯನ್ನು ಸರ್ಕಾರ ಇರಿಸಿಕೊಂಡಿದೆ.

ಇದೆಲ್ಲದಕ್ಕಿಂತ ಮುಖ್ಯವಾಗಿ ಸರಕಾರ ಈ ರೀತಿ ಉದ್ಯೋಗಗಳನ್ನ ಕಲ್ಪಿಸಿ ಕೊಟ್ಟಿರುವ ಅವರ ದತ್ತಾಂಶಗಳನ್ನು ನಿಖರವಾಗಿ ಸಂಗ್ರಹಿಸಿ ಇಟ್ಟುಕೊಳ್ಳಬೇಕಾಗಿದೆ. ಲಕ್ಷಾಂತರ ಉದ್ಯೋಗ ಸೃಷ್ಟಿ ಭರವಸೆ ನೀಡುವ ರಾಜಕೀಯ ಪಕ್ಷಗಳು ನಂತರ ಆ ಭರವಸೆಯನ್ನ ಮರೆತೆ ಬಿಡುತ್ತವೆ.

ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರ ಉದ್ಯೋಗ ಕಲ್ಪಿಸಿಕೊಡುವ ನಿಟ್ಟಿನಲ್ಲಿ ಒಂದು ಒಳ್ಳೆಯ ಹೆಜ್ಜೆ ಇಟ್ಟಿರುವುದು ಹೊಸ ಭರವಸೆ ಮೂಡಿಸಿದೆ. ಹೀಗಾಗಿ ಸರ್ಕಾರದ ವತಿಯಿಂದ ಆಯೋಜಿಸಿರುವ ಉದ್ಯೋಗ ಮೇಳದಲ್ಲಿ ಉದ್ಯೋಗ ಪಡೆದವರ ದತ್ತಾಂಶ ಸಂಗ್ರಹಣೆ ಆದಲ್ಲಿ, ಸರ್ಕಾರ ಎಷ್ಟು ಜನರಿಗೆ ಉದ್ಯೋಗ ಕೊಟ್ಟಿದೆ ಎನ್ನುವ ಸ್ಪಷ್ಟ ಚಿತ್ರಣ ದೊರೆಯಲಿದೆ.

ವಾರ್ಷಿಕ ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಿಕೊಡಲು ಸಾಧ್ಯ ಎನ್ನುವ ದತ್ತಾಂಶ ಲಭ್ಯವಿದ್ದರೆ, ಭವಿಷ್ಯದಲ್ಲಿ ಎಷ್ಟು ಜನರಿಗೆ ಉದ್ಯೋಗ ಕೊಡಲು ಮತ್ತು ಉದ್ಯೋಗ ಸೃಷ್ಟಿಗೆ ಏನೆಲ್ಲ ಕ್ರಮಗಳನ್ನು ಕೈಗೊಳ್ಳಲು ಅವಕಾಶಗಳಿವೆ ಎನ್ನುವ ನಿಖರ ಮಾಹಿತಿ ಸರಕಾರಕ್ಕೆ ದೊರೆಯಲಿದೆ.

ಈ ದತ್ತಾಂಶದಿಂದ ಬಹುದೊಡ್ಡ ಬದಲಾವಣೆ ಸಾಧ್ಯವಾಗದಿದ್ದರೂ ನಿರುದ್ಯೋಗ ಪ್ರಮಾಣ ಬಹುಮಟ್ಟಿಗೆ ಕಡಿಮೆ ಮಾಡಲು ಸಾಧ್ಯವಿದೆ. ಸರ್ಕಾರ ಮೊದಲ ಉದ್ಯೋಗ ಮೇಳದಿಂದಲೇ ಈ ನಿಟ್ಟಿನಲ್ಲಿ ಚಿಂತನೆ ಆರಂಭಿಸಲಿ.

### ಡಾ. ತೋಂಟದ ಸಿದ್ಧಲಿಂಗ ಶ್ರೀಗಳ ಸ್ಮರಣಾರ್ಥ ದತ್ತಿ ಉಪನ್ಯಾಸ

# ಶ್ರೀಗಳ ಜೀವನ ಕನ್ನಡ, ಬಸವಣ್ಣನಿಗೆ ಮೀಸಲಾಗಿತ್ತು

■ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದ ಸಿದ್ಧಲಿಂಗ ಶ್ರೀಗಳು ಗೋಕಾಕ ಚಳವಳಿಗೆ ಸಿಂದಗಿಯಲ್ಲಿ ಮುನ್ನುಡಿ ಬರೆಯುವ ಮೂಲಕ ಕನ್ನಡದ ಅಭಿಯಾನವನ್ನು ಪ್ರಾರಂಭಿಸಿದರು. ಮುಂದೆ ಗದುಗಿನ ಮಠದಲ್ಲಿ ಪುಸ್ತಕ ಪ್ರಕಟನೆಯನ್ನು ಪ್ರಾರಂಭಿಸಿ ಒಂದು ಶತಮಾನದ ಇತಿಹಾಸವನ್ನು ಕನ್ನಡ ನಾಡಿಗೆ ನೀಡಿದ್ದಾರೆ. ಶಿವಾನುಭವ ವೇದಿಕೆ ಮೂಲಕ ಕನ್ನಡವನ್ನು ಕಟ್ಟುವ ಕಾರ್ಯವನ್ನು ಪೂಜೆಯ ರೂಪದಲ್ಲಿ ನೇರವೇರಿಸಿದ್ದಾರೆ. ಅವರ ಜೀವನ ಕನ್ನಡ ಮತ್ತು ಬಸವಣ್ಣನಿಗೆ ಮೀಸಲಾಗಿತ್ತು ಎಂದು ಅಣ್ಣಿಗೇರಿಯ ಸಂಸ್ಕೃತಿ ಚಿಂತಕ ಎಸ್. ಎಸ್. ಹರ್ಲಾಪುರ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಜರುಗಿದ ಡಾ. ತೋಂಟದ ಸಿದ್ಧಲಿಂಗಶ್ರೀಗಳ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ 'ಕನ್ನಡಕ್ಕೆ ಡಾ. ತೋಂಟದ ಸಿದ್ಧಲಿಂಗಶ್ರೀಗಳ ಕೊಡುಗೆ' ಕುರಿತಾಗಿ ಮಾತನಾಡಿದರು.

ಲಿಂಗಾಯತ ಅಧ್ಯಯನ ಸಂಸ್ಥೆಯ ಮೂಲಕ 600ಕ್ಕೂ ಹೆಚ್ಚು ಪುಸ್ತಕಗಳನ್ನು ಪ್ರಕಟಿಸಿ ಮಠವನ್ನು ಜ್ಞಾನ ದಾಸೋಹದ ಕೇಂದ್ರವನ್ನಾಗಿದರು. ಲೇಖಕರನ್ನು, ಸಂಶೋಧಕರನ್ನು ಪ್ರೋತ್ಸಾಹಿಸಿದರು. ಈ ಕಾರ್ಯದಿಂದಲೇ ಅವರನ್ನು ಪುಸ್ತಕ ಸ್ವಾಮಿಜೀ, ಕನ್ನಡ ಜಗದ್ಗುರು ಎಂದು ವ್ಯಾಖ್ಯಾನಿಸಿದರೆಂದು ತಿಳಿಸಿದರು.

ಕಿತ್ತೂರ ಕರ್ನಾಟಕ ದಿನಪತ್ರಿಕೆ ಸಂಪಾದಕ ಮಂಜುನಾಥ ಅಬ್ಬಿಗೇರಿ ಮಾತನಾಡಿ, ಪತ್ರಿಕೆ ನಡೆಸುವದು ಸುಲಭದ ಕೆಲಸವಲ್ಲ. ಪತ್ರಿಕೆಯನ್ನು ಪ್ರಾರಂಭಿಸುವದಕ್ಕೆ ಮುಖ್ಯ ಪ್ರೇರಣೆ ತೋಂಟದ ಸಿದ್ಧಲಿಂಗಶ್ರೀಗಳಾಗಿದ್ದರು. ಸರಕಾರ ಈ ಭಾಗವನ್ನು ಕಿತ್ತೂರ ಕರ್ನಾಟಕ ಎಂದು ಘೋಷಿಸುವ 13 ವರ್ಷಗಳ ಹಿಂದೆಯೇ ಪತ್ರಿಕೆ ಪ್ರಾರಂಭಿಸಲಾಯಿತು. ಸರಕಾರ ಮತ್ತು ಜನರ ಮಧ್ಯೆ ಕೊಂಡಿಯಾಗಿ ಪತ್ರಿಕೆ ಕಾರ್ಯ ಮಾಡುತ್ತಿದೆ. ಜನಸಾಮಾನ್ಯರ ಸಮಸ್ಯೆಗಳನ್ನು ಪತ್ರಿಕೆಗಳ ಮೂಲಕ ಜನಪ್ರತಿನಿಧಿಗಳ ಹಾಗೂ ಅಧಿಕಾರಿಗಳ ಗಮನಕ್ಕೆ ತರುವ ಪ್ರಯತ್ನವನ್ನು ಪ್ರಾಮಾಣಿಕವಾಗಿ ಮಾಡಲಾಗುತ್ತಿದೆ ಎಂದು ತಿಳಿಸಿದರು.



ವೇದಿಕೆ ಮೇಲೆ ಎಸ್.ಎಸ್. ಕಳಸಾಪುರಶೆಟ್ರು ಉಪಸ್ಥಿತರಿದ್ದರು. ಡಾ.ದತ್ತಪ್ರಸನ್ನ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಗೌರವ ಕಾರ್ಯದರ್ಶಿ ಶಿವಾನಂದ ಗಿಡ್ನಂದಿ ವಂದಿಸಿದರು.

ಕಾರ್ಯಕ್ರಮದಲ್ಲಿ ಪ್ರೊ. ಚಂದ್ರಶೇಖರ ವಸ್ತ್ರದ, ಪ್ರೊ ಕೆ.ಎಚ್. ಬೇಲೂರ ಡಾ. ಅನಂತ ಶಿವಪುರ, ಡಾ.ವಾಣಿ ಅನಂತ ಶಿವಪುರ, ಪ್ರೊ. ವಿ.ಎಸ್. ದಲಾಲಿ, ಸಿ.ಕೆ.ಎಚ್. ಶಾಸ್ತ್ರಿ(ಕಡಣಿ), ಎಸ್.ಎಫ್. ಬೆನಕಣ್ಣವರ ಅ.ದ. ಕಟ್ಟೀಮನಿ, ಟಿಕನದಾರ, ಈರನಗೌಡ ಮಣಕವಾಡ, ಎಸ್.ಎಫ್. ಭಜಂತ್ರಿ, ಕೆ.ಎಸ್. ಗುಗ್ಗರಿ, ಸತೀಶ ಹುನಕುಂಟಿ, ಯಲ್ಲಮ್ಮ ತೋಟದ, ಅಜಿತ ಘೋರ್ಪಡೆ, ಆರ್.ಡಿ. ಕಪ್ಪಲಿ, ಪ್ರ.ತೊ. ನಾರಾಯಣಪುರ, ಬಿ.ಎಸ್. ಹಿಂಡಿ, ರತ್ನಕ್ಕ ಪಾಟೀಲ, ನೀಲಮ್ಮ ಅಂಗಡಿ, ಮಂಜುಳಾ ವೆಂಕಟೇಶಯ್ಯ, ರಕ್ಷಿತಾ ಎಸ್.ಗಿಡ್ನಂದಿ, ವಿದ್ಯಾ ಪಾಟೀಲ, ಡಾ. ರಶ್ಮಿ ಅಂಗಡಿ, ಡಾ.ಈರಣ್ಣ ಕೊರಚಗಾಂವ, ಶಿವಕುಮಾರ ಬೇವಿನಮರದ, ಪ್ರಸನ್ನಕುಮಾರ ಇನಾಮದಾರ, ಜೆ.ಆರ್. ಕುಲಕರ್ಣಿ, ಅಕ್ಕಮ್ಮ ಪಾರ್ವತಿಮಠ, ರತ್ನಾ ಪುರಂತರ, ಸುಧಾ ಬಳ್ಳಿ, ಶಶಿಕಾಂತ ಕೊರ್ಲಹಳ್ಳಿ, ಎಂ.ಎಫ್. ಡೋಣಿ, ಶ್ರೀನಿವಾಸ ಕುಲಕರ್ಣಿ, ಜಿ.ವಿ. ಪಾಟೀಲ, ಎಂ.ಎಚ್. ಸವದತ್ತಿ, ಸಿ.ಎಂ. ಮಾರನಬಸರಿ, ಶಂಕರಗೌಡ ಪಾಟೀಲ, ಅಶೋಕ ಸತರೆಡ್ಡಿ, ಷಡಕ್ಷರಿ ಮೆಣಸಿನಕಾಯಿ, ಸತೀಶಕುಮಾರ ಚನ್ನಪ್ಪಗೌಡರ, ಎಚ್.ಟಿ. ಸಂಜೀವಸ್ವಾಮಿ, ಎಂ.ಎಸ್. ಅಸುಂಡಿ, ಕೊಟ್ರೇಶ ಜವಳಿ, ಕಳಕಪ್ಪ ಜಲ್ಲಿಗೇರಿ, ಗೀತಾ ಲಿಂ.ಪಾಟೀಲ, ರಾಜು ದಿಂಡೂರ, ರಾಜಶೇಖರ ಕರಡಿ, ಬಸವರಾಜ ವಾರಿ, ಲಿಂಗರಾಜ ಪಾಟೀಲ, ನಿರ್ಮಲಾ ಪಾಟೀಲ, ಬಿ.ಬಿ. ಪಾಟೀಲ, ಅಮರೇಶ ರಾಂಪುರ, ಡಿ.ಎಸ್. ಬಾಪುರೆ ಉಪಸ್ಥಿತರಿದ್ದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಪೂಜ್ಯ ಶ್ರೀಗಳು ಸೂಕ್ಷ್ಮಮತಿಗಳಾಗಿದ್ದು, ಪ್ರತಿ ವ್ಯಕ್ತಿಯಲ್ಲಿರುವ ಉತ್ತಮ ಗುಣಗಳನ್ನು ಗುರುತಿಸಿ ಪ್ರೋತ್ಸಾಹಿಸುತ್ತಿದ್ದರು. ಬಂದ ಭಕ್ತರಿಗೆ ಪುಸ್ತಕಗಳನ್ನು ಕಾಣಿಕೆಯಾಗಿ ನೀಡಿ ಓದುವ ಸಂಸ್ಕೃತಿಯನ್ನು ಬೆಳೆಸುವ ಮಹತ್ವದ ಕಾರ್ಯವನ್ನು ಮಾಡಿದರು. ಭಕ್ತರು ನೀಡಿದ ಹಣವನ್ನು ಪುಸ್ತಕ ಪ್ರಕಟನೆಗೆ ಬಳಸಿ ಕನ್ನಡ ಸಾಹಿತ್ಯವನ್ನು ಶ್ರೀಮಂತಗೊಳಿಸುವ ಕಾರ್ಯವನ್ನು ಮಾಡಿದರೆಂದು ತಿಳಿಸಿದರು.



■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಮಾನವ ಹಕ್ಕುಗಳ ರಕ್ಷಣಾ ಆಯೋಗದ ಉತ್ತರ ಕರ್ನಾಟಕ ಸಂಚಾಲಕರಾಗಿ ಶಿವಾನಂದ ಪಲ್ಲೇದ ಆಯ್ಕೆಯಾದ ಹಿನ್ನೆಲೆಯಲ್ಲಿ ಗದಗ ಜಿಲ್ಲಾ ಪಂಚಮಸಾಲಿ ಸಮಾಜ ಬಾಂಧವರು ಸೇರಿದಂತೆ ಹಲವು ಸಮುದಾಯದ ಹಿರಿಯರು ಸನ್ಮಾನಿಸಿ, ಗೌರವಿಸಿ ಶುಭ ಕೋರಿದರು.

# ಹೊಳಲಮ್ಮದೇವಿ ರಥೋತ್ಸವ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ತಾಲೂಕಿನ ಶಕ್ತಿದೇವತೆ ದೇವಿಹಾಳ ಶ್ರೀಮಂತಗಡದ ಶ್ರೀ ಹೊಳಲಮ್ಮದೇವಿಯ ಮಹಾರಥೋತ್ಸವವು ಭಾರತ ಹುಣ್ಣಿಮೆಯ ದಿನವಾದ ಫೆ.24ರ ಸಂಜೆ 5 ಗಂಟೆಗೆ ಸಹಸ್ರಾರು ಭಕ್ತರ ಜಯಘೋಷದೊಂದಿಗೆ ಸಡಗರ ಸಂಭ್ರಮದಿಂದ ಜರುಗಿತು.

ಶನಿವಾರ ಬೆಳಿಗ್ಗೆ ಪ್ರಾತಃಕಾಲದಲ್ಲಿ ದೇವಿಗೆ ಉಡಿ ತುಂಬುವುದು ಸೇರಿದಂತೆ ವಿವಿಧ ಪೂಜೆ-ಪುನಸ್ಕಾರಗಳು ನಡೆದವು. ಸಂಜೆ 5ರ ಸುಮಾರಿಗೆ ಉತ್ಸವ ಮೂರ್ತಿಯ ಸಮೇತ ಮಹಾರಥೋತ್ಸವವು ಸಂಭ್ರಮದಿಂದ ಜರುಗಿತು. ಈ ಸಂದರ್ಭದಲ್ಲಿ ವಿವಿಧ ಕಡೆಗಳಿಂದ ಆಗಮಿಸಿದ್ದಂತಹ ಸಾವಿರಾರು ಭಕ್ತರು ದೇವಿಗೆ ಉತ್ತತ್ತಿ, ಬಾಳೆಹಣ್ಣುಗಳನ್ನು ಅರ್ಪಿಸಿ ತಮ್ಮ ಭಕ್ತಿಯನ್ನು ಸಮರ್ಪಿಸಿದರು. ಮೆರವಣಿಗೆಯಲ್ಲಿ ಗಜರಾಜ ಸಮೇತ, ಡೊಳ್ಳಿನ ಮಜಲು, ಝಾಂಜಮೇಳ, ಕಹಳೆ ಸೇರಿದಂತೆ ವಿವಿಧ ವಾದ್ಯಗೋಷ್ಠಿಗಳು ಸಾಥ್ ನೀಡಿದವು.

### ಬಿ.ಡಿ. ತಟ್ಟಿ ಮೆಮೊರಿಯಲ್ ಚಾರಿಟೇಬಲ್ ಟ್ರಸ್ಟ್‌ನ ಕಿವುಡ ಮಕ್ಕಳ ವಸತಿಯುತ ಶಾಲೆಯಲ್ಲಿ ಕಾರ್ಯಕ್ರಮ

# ವಿಶೇಷ ಚೇತನರು ದೇವರ ಮಕ್ಕಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಂಗವಿಕಲ ಮಕ್ಕಳು ವಿಶೇಷವಾದ ಸಾಮರ್ಥ್ಯ, ಪ್ರತಿಭೆ ಹೊಂದಿರುತ್ತಾರೆ. ಅವರು ತಂದೆ-ತಾಯಿ, ಸಮಾಜಕ್ಕೆ ಹೊರೆ ಎಂದು ತಾತ್ಸಾರ, ಕೀಳರಿಮೆ ತೋರದೇ ಅವರನ್ನು ದೇವರ ಮಕ್ಕಳೆಂದು ಪೂಜ್ಯನೀಯ ಭಾವನೆಯಿಂದ ಕಂಡು ಸ್ನೇಹ, ಪ್ರೀತಿ, ವಿಶ್ವಾಸ, ಕಾಳಜಿ ತೋರುವ ಮನಸ್ಥಿತಿ ಎಲ್ಲರದ್ದಾಗಬೇಕು ಎಂದು ಶಾಸಕ ಡಾ.ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ಬಿ.ಡಿ.ತಟ್ಟಿ ಮೆಮೊರಿಯಲ್ ಚಾರಿಟೇಬಲ್ ಟ್ರಸ್ಟ್‌ನ ಕಿವುಡ ಮಕ್ಕಳ ವಸತಿಯುತ ಶಾಲೆಯಲ್ಲಿ ಬೆಂಗಳೂರಿನ ಸಿದ್ವಿನ್ ಔಟೋಟೆಕ್ ಕಂಪನಿಯವರು ಎಪಿಡಿ ಸಂಸ್ಥೆಯ ಸಹಯೋಗದೊಂದಿಗೆ ಶಾಲೆಯ ಮಕ್ಕಳಿಗೆ ಅವಶ್ಯವಿರುವ ಶ್ರವಣ ಸಾಧನ-ಸಲಕರಣೆ ಮತ್ತು ಶುದ್ಧ ಕುಡಿಯುವ ನೀರಿನ 2 ಘಟಕಗಳನ್ನು ನೀಡಿರುವ ಹಿನ್ನೆಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದರು.



ಸಮಾಜದಲ್ಲಿ ಎಲ್ಲ ಮಕ್ಕಳಂತೆ ಈ ಮಕ್ಕಳು ಸ್ವಾವಲಂಬಿಯಾಗಿ ಬೆಳೆಯಬೇಕು. ಅವರಿಗೂ ಸಮಾಜದಲ್ಲಿ ಪ್ರೀತಿ, ವಿಶ್ವಾಸ ಸಿಗಬೇಕು ಎಂಬ ಸದುದ್ದೇಶದಿಂದ ಹಲವು ಸಂಕಷ್ಟಗಳ ನಡುವೆಯೂ ಸಂಸ್ಥೆ ಅಂಗವಿಕಲ ಮಕ್ಕಳ ಶ್ರೇಯೋಭಿವೃದ್ಧಿಗೆ ಶ್ರಮಿಸುತ್ತಿದೆ. ಇವರ ಕಾರ್ಯಕ್ಕೆ ಕೈಜೋಡಿಸುತ್ತಿರುವ ಬೆಂಗಳೂರಿನ ಸಿದ್ವಿನ್ ಔಟೋಟೆಕ್ ಕಂಪನಿ ಕಾರ್ಯ ಶ್ಲಾಘನೀಯ. ಮತ್ತು ಮಕ್ಕಳ ಕಲ್ಯಾಣ ತಾವು ಸರ್ಕಾರದ ಮಹಿಳಾ ಕಮಿಟಿಯಲ್ಲಿರುವುದರಿಂದ ಈ ಶಾಲೆಗೆ ಸರ್ಕಾರದ ಸೌಲಭ್ಯ, ಸ್ವಂತ ಕಟ್ಟಡ ಕಲ್ಪಿಸುವುದು ಸೇರಿ ಮಕ್ಕಳ ಶ್ರೇಯೋಭಿವೃದ್ಧಿಗೆ ಶ್ರಮಿಸುವ ಪ್ರಾಮಾಣಿಕ ಕಾರ್ಯ ಮಾಡುತ್ತೇನೆ ಎಂದರು.

ಕಂಪನಿಯ ನಿರ್ದೇಶಕ ಪ್ರವೀಣ ಪವಾಡಶೆಟ್ಟರ, ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಎಚ್.ಎನ್.ಎಸ್ ಶರ್ಮಾ ಮಾತನಾಡಿ, ಕಳೆದ 2 ದಶಕಗಳಿಂದ ಸಿದ್ವಿನ್ ಔಟೋಟೆಕ್ ಕಂಪನಿಯವರು ಶಿಕ್ಷಣ, ಆರೋಗ್ಯ ಮತ್ತು ಪರಿಸರದ ಮೇಲೆ ಹೆಚ್ಚು ಆದ್ಯಯತೆ ನೀಡಿ, ಸಮಾಜದಲ್ಲಿನ ಸಮಸ್ಯೆಗಳಿಗೆ ಸ್ಪಂದಿಸುವ ಸಣ್ಣ ಪ್ರಯತ್ನವನ್ನು ಮಾಡುತ್ತಿದೆ. ಕಂಪನಿಯಿಂದ ನೀಡಲಾದ ಸಲಕರಣೆಗಳನ್ನು ಬಿ.ಡಿ. ತಟ್ಟಿ ಸಂಸ್ಥೆ ಸದ್ವಿನಿಯೋಗಿಸಿ ಉತ್ತಮ ಸೇವೆ ಮಾಡುತ್ತಿದೆ ಎಂದರು.

ಸಭೆಯ ಅಧ್ಯಕ್ಷತೆಯನ್ನು ಸಂಸ್ಥೆಯ ಗೌರವ ಕಾರ್ಯದರ್ಶಿ ಸೋಮನಾಥ ಮಹಾಜನಶೆಟ್ಟರ ವಹಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅತಿಥಿಗಳಾಗಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಕಂಪನಿ ನಿರ್ದೇಶಕಿ ಆಶಾ, ಆರೋಗ್ಯ ಇಲಾಖೆಯ ಡಾ.ಮಂಜು ಮರಿಗೌಡ್ರ, ಸಂಸ್ಥೆಯ ಟ್ರಸ್ಟಿಗಳಾದ ಆನಂದ ತಟ್ಟಿ, ಮಾಂತೇಶ ತಟ್ಟಿ, ಕಲ್ಯಾಣಿ ತಟ್ಟಿ, ಹಾಗೂ ಸಿದ್ವಿನ್ ಸಂಸ್ಥೆಯ ಸಿಬ್ಬಂದಿಗಳು ಇದ್ದರು. ಜಿ.ಪಿ. ಪವಾರ ಸ್ವಾಗತಿಸಿದರು, ನಿಂಗಪ್ಪ ರೋಣದ ನಿರೂಪಿಸಿದರು. ಗಿರೀಶ ಜಿಡ್ಡಿಮನಿ ವಂದಿಸಿದರು, ವಿಜಯಲಕ್ಷ್ಮೀ ಮುಧೋಳ, ಲಕ್ಷ್ಮೀ ಹೊನ್ನನಾಯ್ಕರ್ ಸಂಜ್ಞೆ ಭಾಷೆಯಲ್ಲಿ ವಿವರಣೆ ನೀಡಿದರು.

# 4ನೇ ಟೆಸ್ಟ್‌ನಲ್ಲಿ ಗೆಲುವು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಇಂಗ್ಲೆಂಡ್ ವಿರುದ್ಧದ 4ನೇ ಟೆಸ್ಟ್ ಪಂದ್ಯದಲ್ಲಿ ಭರ್ಜರಿ ಗೆಲುವಿನ ಬಳಿಕ ಐಸಿಸಿ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಅಂಕಪಟ್ಟಿಯಲ್ಲಿ ಮಹತ್ವದ ಬದಲಾವಣೆಯಾಗಿದ್ದು, ಭಾರತದ 2ನೇ ಸ್ಥಾನ ಮತ್ತಷ್ಟು ಗಟ್ಟಿಯಾಗಿದೆ. ಇಂದು ರಾಂಚಿಯಲ್ಲಿ ಮುಕ್ತಾಯಗೊಂಡ ಇಂಗ್ಲೆಂಡ್ ವಿರುದ್ಧದ 4ನೇ ಟೆಸ್ಟ್ ಪಂದ್ಯದಲ್ಲಿ ಭಾರತ ತಂಡ 5 ವಿಕೆಟ್ ಗಳಿಂದ ಆಂಗ್ಲರನ್ನು ಮಣಿಸಿದೆ. ಆ ಮೂಲಕ 5 ಪಂದ್ಯಗಳ ಟೆಸ್ಟ್ ಸರಣಿಯನ್ನು ಇನ್ನೂ ಒಂದು ಪಂದ್ಯ ಬಾಕಿ ಇರುವಂತೆಯೇ 3-1 ಅಂತರದಲ್ಲಿ ಕೈವಶ ಮಾಡಿಕೊಂಡಿದೆ.

# ವಿದ್ಯೆ ಕೊನೆಯವರೆಗೂ ಜೊತೆಗಿರುತ್ತದೆ



■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳು ಶಿಕ್ಷಣವೆಂಬ ಭದ್ರ ಬುನಾದಿ ಕಟ್ಟಿಕೊಳ್ಳುವ ಮೂಲಕ ತಮ್ಮ ಕನಸುಗಳನ್ನು ಸಾಕಾರಗೊಳಿಸಿಕೊಳ್ಳಬೇಕು ಎಂದು ಮಲ್ಲಸಮುದ್ರದ ಓಂಕಾರೇಶ್ವರ ಮಠದ ಪೂಜ್ಯಶ್ರೀ ಫಕ್ಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯಲ್ಲಿ 5ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಹಾಗೂ ಸರಸ್ವತಿ ಪೂಜಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಶ್ರೀಗಳು ಮಾತನಾಡಿದರು.

ಮಕ್ಕಳಿಗೆ ಇಂದಿನ ದಿನಗಳಲ್ಲಿ ಶಿಕ್ಷಣ, ಸಂಸ್ಕಾರ, ದೇಶಪ್ರೇಮ ಮುಖ್ಯವಾಗಿವೆ. ಪಾಲಕರು ತಮ್ಮ ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿ ಇವುಗಳ ಬಗ್ಗೆ ಅರಿವು ಮೂಡಿಸಿದರೆ ಮುಂದಿನ ದಿನಗಳಲ್ಲಿ ಅವರು ಸಮಾಜಕ್ಕೆ ಉತ್ತಮ ಕೊಡುಗೆ ನೀಡಲು ಸಾಧ್ಯ. ಮಕ್ಕಳನ್ನು ಮೊಬೈಲ್‌ನಿಂದ ದೂರ ಇಟ್ಟು ದೇಶಭಕ್ತರ, ಆದರ್ಶಪುರುಷರ, ಸಾಧಕರ ಚರಿತ್ರೆಗಳನ್ನು ಹೇಳುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ತುಂಬಬೇಕು. ಜೀವನದಲ್ಲಿ ನಮ್ಮೊಂದಿಗೆ ಕೊನೆಯವರೆಗೂ ಬರುವದು ವಿದ್ಯೆ ಮಾತ್ರ ಎಂದರು.

ಕೀರ್ತನಕಾರ ಶಿವಲಿಂಗಯ್ಯ ಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ ಮಾತನಾಡಿ, ಒಂದು ಕಲ್ಲು ನೂರು ಉಳಿಪೆಟ್ಟು ತಿಂದ ಮೇಲೆ ಒಂದು ಮೂರ್ತಿಯಾಗಿ ಪೂಜಿಸಲ್ಪಡುತ್ತದೆ. ಉಳಿಪೆಟ್ಟು ತಿನ್ನದ ಕಲ್ಲು ಮೆಟ್ಟಿಲಾಗುತ್ತದೆ. ಅದ್ದರಿಂದ ಮಕ್ಕಳು ಸಾಧನೆಗೆ ಎದುರಾಗುವ ಎಲ್ಲ ಕಷ್ಟಗಳನ್ನು ಎದುರಿಸಿ ಗುರಿ ಮುಟ್ಟಬೇಕು. ಮೂರ್ತಿಯಾಗುವ ಕಲ್ಲಾಗಿರಬೇಕು, ಮೆಟ್ಟಿಲಾಗುವ ಕಲ್ಲುಗಳಾಗಬೇಡಿ ಎಂದು ಕಿವಿಮಾತು ಹೇಳಿದರು.

ಈ ಸಂದರ್ಭದಲ್ಲಿ ಆಡಳಿತ ಮಂಡಳಿಯ ನಿರ್ದೇಶಕರಾದ ಸಾವಿತ್ರಿ ಬಿ.ಕವಡಕಿ, ಉಮಾ ಇಮರಾಪೂರ, ಸವಿತಾ ಇಮರಾಪೂರ, ಕವಿತಾ ಇಮರಾಪೂರ, ಸಲಹಾ ಸಮಿತಿಯ ಸದಸ್ಯರಾದ ಲೋಕೇಶ ಮಲ್ಲಿಗವಾಡ, ಮುತ್ತು ಜಡಿ, ಮುಖ್ಯ ಶಿಕ್ಷಕಿ ಎಚ್.ಎಂ. ನದಾಫ್, ಸಹಶಿಕ್ಷಕಿಯರಾದ ಎಂ.ಎಂ. ಹಿಡ್ಕೀಮಠ, ಆರ್.ಎಂ. ಅಂಗಡಿ, ಎಸ್.ವೈ. ತಿರುಕಣ್ಣವರ, ವಿ.ವಿ. ಕಲ್ಮನಿ, ಎಸ್.ಎ. ಕರೆಸಾಬಣ್ಣವರ, ಸಿಬ್ಬಂದಿಗಳಾದ ಲಕ್ಷ್ಮಿ ಕಮಡೊಳ್ಳಿ, ಸೈನಾಜಬಾನು ರೋಣ ಮುಂತಾದವರು ಉಪಸ್ಥಿತರಿದ್ದರು.

### ಕೊಳಚೆ ನಿರ್ಮೂಲನ ಮಂಡಳಿ ವತಿಯಿಂದ ನಿರ್ಮಿಸಲಾಗುತ್ತಿರುವ ಮನೆಗಳು ಕಳಪೆ

# ಫಲಾನುಭವಿಗಳಿಂದ ಅಧಿಕಾರಿಗಳ ವಿರುದ್ಧ ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಪ್ರಧಾನ ಮಂತ್ರಿ ಅವಾಸ್ ಯೋಜನೆಯಡಿಯಲ್ಲಿ ಕೊಳಚೆ ನಿರ್ಮೂಲನ ಮಂಡಳಿ ವತಿಯಿಂದ ನಿರ್ಮಿಸಲಾಗುತ್ತಿರುವ ಮನೆಗಳು ಸಂಪೂರ್ಣ ಕಳಪೆಯಾಗಿವೆ. ಗುತ್ತಿಗೆದಾರರು ಕಳಪೆ ಗುಣಮಟ್ಟದ ಮತ್ತು ಕಡಿಮೆ ಪ್ರಮಾಣದ ಸಾಮಗ್ರಿಗಳನ್ನು ನೀಡಿ ಫಲಾನುಭವಿಗಳಿಗೆ ವಂಚಿಸುತ್ತಿದ್ದಾರೆ ಎಂದು ಆರೋಪಿಸಿ ಶನಿವಾರ ಫಲಾನುಭವಿಗಳು ಪ್ರತಿಭಟನೆ ನಡೆಸಿದರು. ಸೇರಿದ್ದ ಫಲಾನುಭವಿಗಳು ಕಳಪೆ ಗುಣಮಟ್ಟದ ಸಾಮಗ್ರಿಗಳನ್ನು ಪ್ರದರ್ಶಿಸಿ ಅಕ್ರೋಶ ವ್ಯಕ್ತಪಡಿಸಿದರು.



ಈ ವೇಳೆ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ, ಯುವ ಮುಖಂಡ ನಾಗರಾಜ ಚಿಂಚಲಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗದ ಜಿಲ್ಲಾಧ್ಯಕ್ಷ ಬಸವರಾಜ ಹಿರೇಮನಿ, ಬಸವರಾಜ ಕಲ್ಲೂರ ಮುಂತಾದವರು ಕೊಳಚೆ ನಿರ್ಮೂಲನ ಮಂಡಳಿಯಿಂದ ನಿರ್ಮಾಣಗೊಳ್ಳುತ್ತಿರುವ ಮನೆಗಳು ಸಂಪೂರ್ಣ ಕಳಪೆಯಾಗಿದ್ದು ಫಲಾನುಭವಿಗಳಿಗೆ ದೊಡ್ಡ ಪ್ರಮಾಣದ ಅನ್ಯಾಯವೇ ನಡೆಯುತ್ತಿದೆ ಎಂದು ಆರೋಪಿಸಿದರು.

ಸರಕಾರದಿಂದ ಮನೆ ನಿರ್ಮಾಣಕ್ಕಾಗಿ ಪ್ರತಿ ಫಲಾನುಭವಿಗೆ 6.39 ಲಕ್ಷ ರೂಗಳನ್ನು ನೀಡುತ್ತಿದೆ. ಆದರೆ ಸದರಿ ಮನೆಗಳನ್ನು ನಿರ್ಮಿಸುತ್ತಿರುವ ಗುತ್ತಿಗೆದಾರರು ನೀಡುತ್ತಿರುವ ಕಚ್ಚಾ ಸಾಮಗ್ರಿಗಳ ಬೆಲೆ ಅಂದಾಜು 2.80-3 ಲಕ್ಷ ರೂಗಳಷ್ಟು ಮಾತ್ರ ಆಗುತ್ತಿದೆ. ಮನೆ ನಿರ್ಮಿಸಲು ನೀಡುತ್ತಿರುವ ಸಿಮೆಂಟ್, ಕಬ್ಬಿಣ, ಎಂಸ್ಯಾಂಡ್, ಖಡಿ, ಕಿಟಕಿ, ಬಾಗಿಲು, ಸೇರಿದಂತೆ ಎಲ್ಲವೂ ಅತ್ಯಂತ ಕಳಪೆ ಗುಣಮಟ್ಟದ್ದಾಗಿವೆ. ಒಂದು ಮನೆಯಿಂದ ಲಕ್ಷಾಂತರ ರೂ. ಹಣ ಹೊಡೆಯುವ ಹುನ್ನಾರವೇ ನಡೆದಿದೆ ಎಂದು ಆರೋಪಿಸಿದರು.

ಈ ಬಗ್ಗೆ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಇಲಾಖೆಯರುವ ಶೀಘ್ರ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಬೇಕು. ಇಲ್ಲದಿದ್ದಲ್ಲಿ ಮುಂದಿನ ದಿನಗಳಲ್ಲಿ ಈ ಪ್ರತಿಭಟನೆ ಉಗ್ರ ಸ್ವರೂಪ ಪಡೆದುಕೊಳ್ಳಲಿದೆ ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ತಾಲೂಕು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೇದಿಕೆಯ ಅಧ್ಯಕ್ಷ ಸುರೇಶ್ ಹಟ್ಟಿ, ಮಂಜುನಾಥ ಮುಳಗುಂದ, ನೂರಹ್ಮದ ಶಿಗ್ಗಾಂವಿ, ಜಾವಿದಖಾನ್ ಸಿದ್ದಿ, ಸುಲ್ತಾನಭಾಷಾ ಸಿದ್ದಿ, ಬಸವರಾಜ ಪೂಜಾರ, ಚಂದ್ರು ಮಾಗಡಿ, ಈರಣ್ಣ ಶಿರಕೋಳ, ಪ್ರವೀಣ ಕಮಡೊಳ್ಳಿ, ರೇಣುಕಾ ಮುಳಗುಂದ, ಬಸವರಾಜ ಪೂಜಾರ, ಕೊಟ್ರಮ್ಮ ದ್ಯಾಮಣ್ಣವರ, ಚಿನ್ನಮ್ಮ ಕಮಡೊಳ್ಳಿ, ಬಸವರಾಜ ಪಾಣಿಗಟ್ಟಿ, ರತ್ನವ್ವ ಗೋಡಿ ಸೇರಿದಂತೆ ನೂರಾರು ಫಲಾನುಭವಿಗಳು ಪಾಲ್ಗೊಂಡಿದ್ದರು.

# ಚಿನ್ನದ ಚೊಂಬು ತುಂಬಿ ತುಳುಕಿತಲೇ...



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಪಟ್ಟಣದ ಮೈಲಾರಲಿಂಗೇಶ್ವರ ಕಾರ್ಣಿಕ ಹೊರಬಿದ್ದಿದ್ದು, 'ಚಿನ್ನದ ಚೊಂಬು ತುಂಬಿ ತುಳುಕಿತಲೇ ಪರಾಕ್' ಎಂದು ಗೊರವಪ್ಪನಾದ ಕೋಟೆಪ್ಪ ಕಾರ್ಣಿಕ ನುಡಿಯನ್ನು ನುಡಿದರು.

ಪಟ್ಟಣದ ಹೊರ ವಲಯದಲ್ಲಿರುವ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನದ ಅವರಣದಲ್ಲಿ ಪ್ರತಿ ವರ್ಷ ಭರತ ಹುಣ್ಣಿಮೆಯಂದು ನಡೆಯುವ ಕಾರ್ಣಿಕಕ್ಕೆ ರೈತರು ಹೆಚ್ಚು ಮಹತ್ವ ನೀಡುತ್ತಾರೆ. ಈ ಬಾರಿಯ ಕಾರ್ಣಿಕ ನುಡಿಯನ್ನು ವಿಶ್ಲೇಷಣೆಯನ್ನು ರಾಜ್ಯದಲ್ಲಿ ಸಮೃದ್ಧವಾದ ಮಳೆ, ಬೆಳೆಯಾಗಲಿದ್ದು, ಜನರೆಲ್ಲಾ ಸುಭಿಕ್ಷೆಯಿಂದ ನೆಮ್ಮದಿ, ಸಹಬಾಳ್ವೆಯಿಂದ ಬದುಕುತ್ತಾರೆ ಎಂದು ಅರ್ಥೈಸಬಹುದಾಗಿದೆ.

ಭವಿಷ್ಯವಾಣಿ ನುಡಿಯುವ ಕಾರ್ಣಿಕೋತ್ಸವದ ಮೊದಲು ಗೊರವಯ್ಯ ಒಂಬತ್ತು ದಿನಗಳ ಕಟ್ಟುನಿಟ್ಟಿನ ಉಪವಾಸ, ತಪದಲ್ಲಿರುತ್ತಾನೆ. ನಂತರ ಕ್ಷೇತ್ರದ ಧರ್ಮದರ್ಶಿಯವರೊಂದಿಗೆ ಡಂಕನಮರಡಿ ಎನ್ನುವ ಸ್ಥಳಕ್ಕೆ ಬಂದು, ಅಲ್ಲಿ ಧರ್ಮದರ್ಶಿಗಳಿಂದ ಬಂಡಾರದ ಆಶೀರ್ವಾದ ಪಡೆದು ನಂತರ 12 ಅಡಿ ಎತ್ತರದ ಬಿಲ್ಲು ಗಂಬವನ್ನು ಸರ ಸರನೇರಿ, ಆಕಾಶವನ್ನು ನೋಡುತ್ತಾ ಒಂದು ವಾಕ್ಯದ ಭವಿಷ್ಯವನ್ನು ನುಡಿದರು.

ಈ ಸಂಧರ್ಭದಲ್ಲಿ ಧರ್ಮಕರ್ತರುಗಳಾದ ದತ್ತಾತ್ರೇಯರಾವ್, ಡಾ. ಪಿ.ನಾಗೇಶ್ವರ ರಾವ್, ಕೋಟೇಶ್ ರಾವ್, ಪಿ.ಮಾರ್ತಾಂಡ ರಾವ್, ಪ್ರವೀಣ್, ಪುರಸಭೆ ಸದಸ್ಯ ಕಿರಣ್ ಶ್ಯಾನಬೋಗ, ಗೊರವಯ್ಯ ಕೆ.ಕೊಟೆಪ್ಪ, ಎ.ಮಂಜಪ್ಪ, ಮೈಲಾರಿ, ಎ.ನಿಂಗಪ್ಪ ಸೇರಿದಂತೆ ಮೈಲಾರಲಿಂಗೇಶ್ವರನ ಅಪಾರ ಭಕ್ತಾಧಿಗಳು ಪಾಲ್ಗೊಂಡು ಭಕ್ತಿ ಸಮರ್ಪಿಸಿದರು.

## ಕೆಆರ್‌ಎಸ್ ಪಕ್ಷದ 'ಜನಜಾಗೃತಿ ಬೈಕ್ ಜಾಥಾ' ಫೆ.28ರಂದು ನಗರಕ್ಕೆ: ವೀರನಗೌಡ ಮೂಗನೂರ

# ಪಕ್ಷದ ನಾಡಪ್ರೇಮಿ ಸೈನಿಕರನ್ನು ಬೆಂಬಲಿಸಿ




■ವಿಜಯಸಾಕ್ಷಿ ಸುದ್ದಿ, ಗದಗ

ತಮ್ಮ ಭ್ರಷ್ಟಚಾರ, ಸ್ವಜನಪಕ್ಷಪಾತ, ದುರಾಡಳಿತದ ಮೂಲಕ ರಾಜ್ಯದ ಜನರಿಗೆ ನಿರಂತರವಾಗಿ ದ್ರೋಹ ಮಾಡುತ್ತಿರುವ ರಾಷ್ಟ್ರೀಯ ಪಕ್ಷಗಳನ್ನು ತಿರಸ್ಕರಿಸಿ, ರಾಜ್ಯದ ಏಕೈಕ ಪ್ರಾಮಾಣಿಕ ಮತ್ತು ಪ್ರಾದೇಶಿಕ ಪಕ್ಷವಾದ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷವನ್ನ ಬೆಂಬಲಿಸುವಂತೆ ರಾಜ್ಯದ ಜನರನ್ನ ಕೋರಲು ಹಾಗೂ ಸ್ವಚ್ಛ, ಪ್ರಾಮಾಣಿಕ, ಜನಪರ, ಪ್ರಾದೇಶಿಕ ರಾಜಕಾರಣದ ಕುರಿತು ಜನಜಾಗೃತಿ ಮೂಡಿಸಲು ಫೆ.19ರಿಂದ ಕೆಆರ್‌ಎಸ್ ಪಕ್ಷವು 'ಕರ್ನಾಟಕಕ್ಕಾಗಿ ನಾವು' ಎನ್ನುವ ಹೆಸರಿನಲ್ಲಿ ರಾಜ್ಯವ್ಯಾಪಿ ಬೈಕ್ ಜಾಥಾ ಹಮ್ಮಿಕೊಂಡಿದ್ದು, ಫೆ.28ರಂದು ಗದಗ ನಗರಕ್ಕೆ ಆಗಮಿಸಲಿದೆ ಎಂದು ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವೀರನಗೌಡ ಮೂಗನೂರ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಈಗಾಗಲೇ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಿಂದ ಆರಂಭವಾಗಿರುವ ಈ ಜಾಥಾದ ನೇತೃತ್ವವನ್ನು ಪಕ್ಷದ ಅಧ್ಯಕ್ಷ ರವಿ ಕೃಷ್ಣಾರೆಡ್ಡಿಯವರು ವಹಿಸಿದ್ದು, ಫೆ.19ರಿಂದ ಮಾರ್ಚ್.2ರವರೆಗೆ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಜಾಥಾ ಸಂಚರಿಸಲಿದೆ. 29 ಜಿಲ್ಲಾ ಕೇಂದ್ರಗಳು ಮತ್ತು ಐವತ್ತಕ್ಕಿಂತ ಹೆಚ್ಚು ತಾಲ್ಲೂಕು ಕೇಂದ್ರಗಳು ಸೇರಿದಂತೆ ಸುಮಾರು 82 ಪಟ್ಟಣ/ನಗರಗಳಲ್ಲಿ ಸಾರ್ವಜನಿಕ ಸಭೆ ನಡೆಯಲಿದೆ. ಫೆಬ್ರುವರಿ 2ರಂದು ನೆಲಮಂಗಲದಲ್ಲಿ ಬೃಹತ್ ಸಮಾರೋಪ ಸಮಾವೇಶ ನಡೆಯಲಿದೆ ಎಂದರು.

ಈ ಜಾಥಾ ಸಂದರ್ಭದಲ್ಲಿ 'ಭ್ರಷ್ಟರನ್ನು, ಅಪ್ರಾಮಾಣಿಕರನ್ನು, ಸ್ವಜನಪಕ್ಷಪಾತಿಗಳನ್ನು, ಅನೈತಿಕ ನಡವಳಿಕೆ ಉಳ್ಳವರನ್ನು, ಸುಳ್ಳರನ್ನು, ಸಮಾಜಘಾತುಕ ಶಕ್ತಿಗಳನ್ನು ಕುಟುಂಬ ರಾಜಕಾರಣದ ಮೂಲಕ ಪ್ರಜಾಪ್ರಭುತ್ವದ ಆಶಯಗಳನ್ನು ಮಣ್ಣು ಪಾಲು ಮಾಡುತ್ತಿರುವ ಜೆ.ಸಿ.ಬಿ ಪಕ್ಷಗಳ ಪರಮಸ್ವಾರ್ಥಿ ರಾಜಕಾರಣಿಗಳನ್ನು ತಮ್ಮ ಮತ್ತು ತಮ್ಮ ಮಕ್ಕಳ ರಾಜಕೀಯ ನಾಯಕರೆಂದು ಒಪ್ಪಿಕೊಳ್ಳದೆ ಜನಪರ ಕಾಳಜಿಯ ಸ್ವಚ್ಛ ಮತ್ತು ಪ್ರಾಮಾಣಿಕ ರಾಜಕೀಯ ವ್ಯವಸ್ಥೆಗಾಗಿ ನಿರಂತರವಾಗಿ ಶ್ರಮಿಸುತ್ತಿರುವ ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷದ ನಾಡಪ್ರೇಮಿ ಸೈನಿಕರನ್ನು ಮತ್ತು ಕೆಆರ್‌ಎಸ್ ಪಕ್ಷವನ್ನು ಬೆಂಬಲಿಸಿ' ಎಂದು ಪಕ್ಷದ ರಾಜ್ಯಾಧ್ಯಕ್ಷ ರವಿ ಕೃಷ್ಣಾರೆಡ್ಡಿ ರಾಜ್ಯದ ಜನರಲ್ಲಿ ಮನವಿ ಮಾಡಿದ್ದಾರೆ ಎಂದು ವೀರನಗೌಡ ಮೂಗನೂರ ತಿಳಿಸಿದರು.

ಹತ್ತಾರು ಯಶಸ್ವಿ ಜಾಥಾ ಮತ್ತು ಅಭಿಯಾನಗಳ ಕಾರಣಕ್ಕಾಗಿಯೇ ಕಳೆದ ವರ್ಷ ನಡೆದ ಸಾರ್ವತ್ರಿಕ ವಿಧಾನಸಭಾ ಚುನಾವಣೆಯಲ್ಲಿ ಯಾವುದೇ ಚುನಾವಣಾ ಅಕ್ರಮಗಳನ್ನು ಎಸಗದೆ, ಹಣ–ಹೆಂಡ ಹಂಚದೆ, ಜಾತಿ–ಕೋಮುಗಳ ಅನೈತಿಕ ರಾಜಕಾರಣ ಮಾಡದೆ ಕೆಆರ್‌ಎಸ್ ಪಕ್ಷವು 195 ವಿಧಾನಸಭಾ ಕ್ಷೇತ್ರಗಳಲ್ಲಿ ಸ್ಪರ್ಧಿಸಲು ಸಾಧ್ಯವಾಗಿದ್ದು, ಯಾವುದೇ ಸರ್ಕಾರಿ ಅಧಿಕಾರಿಗಳ ಮತ್ತು ರಾಜಕಾರಣಿಗಳ ಕರ್ತವ್ಯಲೋಪದ ವಿಚಾರ ಬಂದಾಗ ರಾಜ್ಯದ ಜನರಿಗೆ ಇಂದು ನೆನಪಾಗುವುದೇ ಕೆಆರ್‌ಎಸ್ ಪಕ್ಷ ಹಾಗೂ ಪಕ್ಷದ ಪ್ರಾಮಾಣಿಕ ಮತ್ತು ಧೈರ್ಯಶಾಲಿ ಸೈನಿಕರು ಎಂದರು.

ಮುಂದಿನ ಒಂದೆರಡು ತಿಂಗಳಿನಲ್ಲಿ ಬರಲಿರುವ ಲೋಕಸಭಾ ಚುನಾವಣೆಯಲ್ಲಿ ರಾಜ್ಯದ 28 ಲೋಕಸಭಾ ಕ್ಷೇತ್ರದಲ್ಲಿಯೂ ಸ್ಪರ್ಧೆ ಮಾಡುವುದಾಗಿ ವೀರನಗೌಡ ಮೂಗನೂರ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಕಾರ್ಯದರ್ಶಿ ಫಕೀರಗೌಡ ತಮ್ಮನಗೌಡ, ಮೌಲಾಸಾಬ ಪೆಂಡಾರಿ, ರಫೀಕಸಾಬ ಅಣ್ಣಿಗೇರಿ, ಸುಲೇಮಾನ ಬೆಟಗೇರಿ, ಬಸವರಾಜ ಅರಗಂಜಿ, ಖಾದಿರಸಾಬ ತೆಕ್ಕಲಕೋಟೆ, ಕೋಟೇಶ ಮುಳಗುಂದ, ಕೃಷ್ಣಾ ವಡವಿ ಸೇರಿದಂತೆ ಇತರರಿದ್ದರು.

# ಪಕ್ಷದ ಬಲವರ್ಧನೆಗೆ ಒಟ್ಟಾಗಿ ಶ್ರಮಿಸೋಣ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಕಾಂಗ್ರೆಸ್ ಪಕ್ಷವು ಆಂತರಿಕ ಬಿಕ್ಕಟ್ಟಿನಿಂದ ತಾಲೂಕಿನಲ್ಲಿ ಅಂತ್ಯಕ್ಕೆ ಮುನ್ನುಡಿಯಾಗಿದೆ ಎನ್ನುವವರಿಗೆ ಪಕ್ಷದ ಎಲ್ಲಾ ಮುಖಂಡರು ಒಂದೆಡೆ ಸೇರುವ ಮೂಲಕ, ಲೋಕಸಭೆ ಚುನಾವಣೆಯಲ್ಲಿ ಪಕ್ಷ ಬೆಂಬಲಿತ ಅಭ್ಯರ್ಥಿಗೆ ಅತಿ ಹೆಚ್ಚು ಮತಗಳ ಮುನ್ನಡೆ ನೀಡಿ ಪಕ್ಷ ಬಲವರ್ಧನೆಗೆ ಬೆಂಬಲಿಸೋಣ ಎಂದು ಶಾಸಕಿ ಎಂ.ಪಿ. ಲತಾ ಮಲ್ಲಿಕಾರ್ಜುನ್ ತಿಳಿಸಿದರು.

ಪಟ್ಟಣದ ವೀರಭದ್ರೇಶ್ವರ ದೇವಸ್ಥಾನದ ಮುಂಭಾಗದಲ್ಲಿ ನೂತವಾಗಿ ಆಯ್ಕೆಗೊಂಡ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರ ಪದಗ್ರಹಣ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪಕ್ಷದಲ್ಲಿ ಏನೇ ಆಂತರಿಕ ಭಿನ್ನಾಭಿಪ್ರಾಯಗಳಿದ್ದರೂ ಅವುಗಳನ್ನು ಸರಿಪಡಿಸಿಕೊಂಡು ನಾವೆಲ್ಲರೂ ಮುಂಬರುವ ಲೋಕಸಭೆ, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ ಚುನಾವಣೆಗಳ ಗೆಲುವಿಗೆ ಶ್ರಮಿಸಬೇಕು. ಚುನಾವಣಾ ಪೂರ್ವದಲ್ಲಿ ನೀಡಿದ್ದ 5 ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಒದಗಿಸಿದ್ದೇವೆ. ಎಲ್ಲಾ ಯೋಜನೆಗಳಿಂದ ದೀನದಲಿತರಿಗೆ, ಮಧ್ಯಮ ವರ್ಗದ ಜನತೆಗೆ, ಬಡ ನಿರುದ್ಯೋಗಿ ಯುವಕರಿಗೆ ಅನುಕೂಲವಾಗಿದೆ ಎಂದರು.

ವಿಜಯನಗರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿರಾಜ್ ಶೇಖ್ ಮಾತನಾಡಿ, 5 ಗ್ಯಾರಂಟಿ ಯೋಜನೆಗಳ ಪ್ರಯೋಜನಗಳ ಬಗ್ಗೆ ಪ್ರತಿ ಮನೆಗೆ ತೆರಳಿ ತಿಳಿಸವ ಮೂಲಕ ಮುಂಬರುವ ಚುನಾವಣೆಯಲ್ಲಿ ಗೆಲುವಿಗಾಗಿ ಒಗ್ಗಟ್ಟಾಗಿ ಶ್ರಮಿಸೋಣ ಎಂದರು.

ನೂತನವಗಿ ಆಯ್ಕೆಯಾದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ ಮಾತನಾಡಿ, ಪಕ್ಷ ನೀಡಿರುವ ಜವಾಬ್ದಾರಿಗೆ ಸಮರ್ಪಕ ನ್ಯಾಯ ಒದಗಿಸತ್ತೇನೆ. ತಾಲೂಕಿನ ಇನ್ನೂ ಕೆಲವು ಮುಖಂಡರಲ್ಲಿ ಅಸಮಾಧಾನಗಳಿದ್ದು, ಎಲ್ಲರನ್ನೂ ಒಗ್ಗೂಡಿಸಿ ಪಕ್ಷ ಬಲವರ್ಧನೆಗೆ ಕಂಕಣ ಬದ್ದವಾಗಿ ನಿಲ್ಲೋಣ ಎಂದರು.

ಪಕ್ಷದ ಹಿರಿಯ ಮುಖಂಡರಾದ ಮಹಾಬಲೇಶ್ವರ ಗೌಡ ಮಾತನಾಡಿದರು. ಮಲ್ಲಿಕಾರ್ಜುನ್, ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಹೆಚ್.ಬಿ. ಮಂಜುನಾಥ, ಚಂದ್ರಶೇಖರ್ ಭಟ್, ವೆಂಕಟೇಶ್ ವಕೀಲರು, ಎಂ.ರಾಜಶೇಖರ, ಬಿ.ಕೆ.ಪ್ರಕಾಶ್, ಗೊಂಗಡಿ ನಾಗರಾಜ್, ಜಯಲಕ್ಷ್ಮೀ, ವಗ್ಗಾಲಿ ನಜೀರ್, ಉದಯಶಂಕರ್, ಅಗ್ರಹಾರ ಎಂ.ರವಿ, ಬಿ.ಬಿ. ಹೊಸೂರಪ್ಪ ಬಾಗಳಿ ಮುಂತಾದವರಿದ್ದರು.

# ಸಮಾಜಮುಖಿ ಬದುಕಿಗೆ ಪಠ್ಯೇತರ ಚಟುವಟಿಕೆಗಳೂ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ಪಠ್ಯಗಳು ಪದವಿ ಸಂಪಾದಿಸಿ ಬದುಕನ್ನು ರೂಪಿಸಿಕೊಳ್ಳಲು ಸಹಕಾರಿಯಾದರೆ, ಪಠ್ಯೇತರ ಚಟುವಟಿಕೆಗಳು ಸಮಾಜಮುಖಿಯಾಗಿ ಬದುಕಲು ಬಹುಮುಖ್ಯವಾಗಿವೆ. ಇವೆರಡೂ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ ಎಂದು ಪ್ರೊ. ನವೀನ ತೀರ್ಲಾಪುರ ಹೇಳಿದರು.

ಅವರು ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕವು ಸ್ಥಳೀಯ ಆಶ್ರಯ ಕಾಲೋನಿಯಲ್ಲಿ ಹಮ್ಮಿಕೊಂಡಿದ್ದ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು.

ವಿದ್ಯಾರ್ಥಿಗಳು ಪದವಿ ಅಧ್ಯಯನದಿಂದ ಜ್ಞಾನ ಸಂಪಾದಿಸಿ, ಈ ಜ್ಞಾನಕ್ಕೆ ಅನುಗುಣವಾಗಿ ಉದ್ಯೋಗ ಪಡೆದು, ಸಮಾಜಮುಖಿಯಾಗಿ ಕಾರ್ಯನಿರ್ವಹಿಸಲು ಪಠ್ಯೇತರ ಚಟುವಟಿಕೆಗಳಿಂದ ಸಂಪಾದಿಸಿದ ಜ್ಞಾನವು ಸಹಕಾರಿಯಾಗುತ್ತದೆ. ಜೊತೆಗೆ ಈ ಜ್ಞಾನವೇ ವಿದ್ಯಾರ್ಥಿಗಳು ಸಾಂಸ್ಕೃತಿಕವಾಗಿ ಬೆಳೆದು ಸಮಾಜದ ಗೌರವಕ್ಕೆ ಪಾತ್ರರಾಗಲು ಪೂರಕವಾಗುತ್ತದೆ ಎಂದರು.

ರಾಜೇಶ್ವರಿ ಬದ್ನೀಕಾಯಿ ಮಾತನಾಡಿ, ಇಂಥಹ ಸಮಾಜಮುಖಿ ಕಾರ್ಯಗಳಿಂದಲೇ ವ್ಯಕ್ತಿ ಬದುಕಿನುದ್ದಕ್ಕೂ ಸಮಾಜದ ಗೌರವಕ್ಕೆ ಪಾತ್ರನಾಗಲು ಸಾಧ್ಯ ಎಂದರು. ಪ್ರಾಂಶುಪಾಲ ಡಾ. ಶಿವಪ್ಪ ಕುರಿ ಅಧ್ಯಕ್ಷೀಯ ಭಾಷಣದಲ್ಲಿ, ವಿದ್ಯಾರ್ಥಿಗಳು ಸ್ವಯಂ ಸೇವಕರಾಗಿ ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳುವುದು ತಮ್ಮ ಜೀವನ ಮೌಲ್ಯಗಳಲ್ಲಿ ಅತ್ಯುತ್ತಮವಾಗಿದೆ. ಈ ಸೇವಾ ಮನೋಭಾವನೆಯನ್ನು ತಮ್ಮ ಬದುಕಿನುದ್ದಕ್ಕೂ ಅಳವಡಿಸಿಕೊಳ್ಳಲು ಸೂಚಿಸಿದರು.

ಎನ್.ಎಸ್.ಎಸ್. ಘಟಕದ ಸಂಯೋಜನಾಧಿಕಾರಿ ಮತ್ತು ಶಿಬಿರಾಧಿಕಾರಿ ಡಾ. ಅಪ್ಪಣ್ಣ ಹಂಜೆ ಶಿಬಿರದ ಯಶಸ್ಸಿಗೆ ಸಹಕರಿಸಿದ ಸಿಬ್ಬಂದಿಗಳು, ಸ್ಥಳೀಯರು, ವಿದ್ಯಾರ್ಥಿಗಳಿಗೆ ವಂದನೆಗಳನ್ನು ಸಲ್ಲಿಸಿದರು. ಸಹ ಶಿಬಿರಾಧಿಕಾರಿ ಡಾ. ಪ್ರಬಲ ರೊಡ್ಡಣ್ಣವರ ನಿರೂಪಿಸಿದರು.

## ಶಿಗ್ಲಿಯಲ್ಲಿ ನಡೆದ 334ನೇ ಶಿವಾನುಭವ ಗೋಷ್ಠಿಯಲ್ಲಿ ಡಾ. ಶಂಭು ಬಳಿಗಾರ

# ಶ್ರೇಷ್ಠ ಗುರು–ಶಿಷ್ಯ ಪರಂಪರೆ ಮುಂದುವರೆಯಲಿ




■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗುರು–ಶಿಷ್ಯ ಪರಂಪರೆಯು ಭಾರತೀಯ ಸಂಸ್ಕೃತಿ ಮತ್ತು ಸಂಪ್ರದಾಯದ ಜೀವಾಳವಾಗಿದೆ ಎಂದು ರಾಜ್ಯೋತ್ಸವ ಪುರಸ್ಕೃತ ಜಾನಪದ ವಿದ್ವಾಂಸ ಡಾ. ಶಂಭು ಬಳಿಗಾರ ಹೇಳಿದರು.

ಅವರು ಶಿಗ್ಲಿಯ ಸೇವಾ ಮಂದಿರದಲ್ಲಿ ನಡೆದ 334ನೇ ಶಿವಾನುಭವ ಗೋಷ್ಠಿ ಮತ್ತು ದಿ ಎಂ.ವಿ. ಲೋಹಾರ ಗುರುಗಳ ಸಂಸ್ಮರಣಾ ಗ್ರಂಥ 'ಮೇರುಗುರು' ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದರು.

ಗುರು–ಶಿಷ್ಯರ ಪವಿತ್ರ ಸಂಬಂಧ ಶಿಕ್ಷಣ ಕ್ಷೇತ್ರವನ್ನೂ ಮೀರಿ ಆಧ್ಯಾತ್ಮಿಕ, ನೈತಿಕ ಮತ್ತು ಬದುಕಿನುದ್ದಕ್ಕೂ ಬೆಳಕಾಗುವ ಪವಿತ್ರವಾದ ಬಂಧವೇ ಆಗಿದೆ. ಪ್ರತಿ ವ್ಯಕ್ತಿಯ ಬಾಳಿಗೆ ಬೆಳಕಾದ ತಂದೆ–ತಾಯಿ ಮತ್ತು ಗುರುಗಳನ್ನು ಧನ್ಯತಾ ಭಾವದಿಂದ ಸ್ಮರಿಸಿದಾಗ ಮಾತ್ರ ಬದುಕಿಗೊಂದು ಅರ್ಥ ಬರುತ್ತದೆ. ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಭಾರತ ಆದಿ ಮಾನವ ಕಾಲದಿಂದ ಆಧುನಿಕತೆಯತ್ತ ಸಾಧನೆಗೈದಿದ್ದರೂ ದೇಶದ ಸಂಸ್ಕೃತಿ, ಸಂಪ್ರದಾಯ, ಮಾನವೀಯ ಮೌಲ್ಯಗಳು ಅಚ್ಚಳಿಯದೇ ಉಳಿದಿರಲು ಗುರು ಪರಂಪರೆಯೇ ಕಾರಣವಾಗಿದೆ. ಈ ಶ್ರೇಷ್ಠವಾದ ಗುರು–ಶಿಷ್ಯ ಪರಂಪರೆ ಮುಂದುವರೆಯಬೇಕು ಎಂದರು.

ಸೇವಾ ಮಂದಿರದ ಶ್ರೀ ಇಷ್ಟಲಿಂಗ ಮಹಾಸ್ವಾಮಿಗಳು ಉಪಸ್ಥಿತರಿದ್ದು ಆಶೀರ್ವಚನಗೈದರು. ಡಾ. ಎಸ್.ಪಿ. ಬಳಿಗಾರ ಸಹೋದರರು ಗ್ರಂಥ ಬಿಡುಗಡೆಗೊಳಿಸಿದರು. ಎನ್.ಡಿ. ಮೇಗಲಮನಿ ಗ್ರಂಥ ವಿಶ್ಲೇಷಣೆ ಮಾಡಿದರು. ಡಾ. ಪಿ.ಡಿ. ತೋಟದ ಶಿವಾನುಭವ ನೆರವೇರಿಸಿದರು. ಭಾರತ ಹುಣ್ಣಿಮೆ ಅಂಗವಾಗಿ ಶ್ರೀಮಠದಲ್ಲಿನ ಶ್ರೀ ವೀರೇಶ್ವರ ಶರಣರ ಮತ್ತು ಶ್ರೀ ಬಸವಕುಮಾರ ಅಜ್ಜನವರ ಗದ್ದುಗೆಗಳ ಪೂಜೆ, ಪ್ರಾರ್ಥನೆ, ವಚನ ಗಾಯನ, ಪ್ರವಚನ, ಮಕ್ಕಳಿಂದ ಭಕ್ತಿಗೀತೆ ಮತ್ತು ಪ್ರಸಾದ ವಿತರಣೆ ನಡೆದವು.

ಸಾನ್ನಿಧ್ಯ ವಹಿಸಿದ್ದ ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ತಾಂತ್ರಿಕತೆಯ ಪ್ರಭಾವದ ನಡುವೆಯೂ ನಮ್ಮ ಸಂಪ್ರದಾಯ, ಸಂಸ್ಕೃತಿ, ಆಚಾರ–ವಿಚಾರಗಳು ಮತ್ತು ಹಿರಿಯರು ನಡೆದು ಬಂದ ದಾರಿಯಲ್ಲಿ ಸಾಗಬೇಕು. ಸತ್ಸಂಗ–ಗುರುಸ್ಮರಣೆ ಕಾರ್ಯಕ್ರಮಗಳು ಸಾತ್ವಿಕ ಮನಸ್ಸುಗಳನ್ನು ಕಟ್ಟಿ ಸುಸಂಸ್ಕೃತ ಸಮಾಜ ನಿರ್ಮಾಣಕ್ಕೆ ಸಹಾಯಕಾರಿಯಾಗಿವೆ. ಈ ನಿಟ್ಟಿನಲ್ಲಿ ಸಿದ್ದೇಶ್ವರ ಶ್ರೀಗಳ ಕೃಪಾಶೀರ್ವಾದಿಂದ ಶಿಗ್ಲಿಯ ಸೇವಾ ಮಂದಿರದಲ್ಲಿ 3 ದಶಕದಿಂದ ಸತ್ಸಂಗ–ಶಿವಾನುಭವಗೋಷ್ಠಿ ನಡೆಸುತ್ತಿರುವುದು ಶ್ರೇಷ್ಠ ಕಾರ್ಯವಾಗಿದೆ ಎಂದರು.

ಈ ವೇಳೆ ಸುಂದರಮ್ಮ ಲೋಹಾರ, ಕಸ್ತೂರೆಮ್ಮ ಹಿರೇಮಠ, ಎಚ್ಚರಪ್ಪ ಬಡಿಗೇರ, ಮಂಜುನಾಥ ನಾವಿ, ಗುರಪ್ಪಜ್ಜ ಶೆಟ್ಟರ,ಶಿವಣ್ಣ ಭಂಡಾರಿ, ಡಾ. ವಿ.ಬಿ. ಮೇಲ್ಮುರಿ, ಜಯಣ್ಣ ಬೋರಗಾಂವಕರ, ವೀರಣ್ಣ ಪವಾಡದ ಸೇರಿ ಹಿರಿಯರು, ಗಣ್ಯರು, ಕಸಾಪ ಗ್ರಾಮ ಘಟಕ ಮತ್ತು ಸೇವಾ ಮಂದಿರ ಸತ್ಸಂಗ ಬಳಗ ಸದಸ್ಯರು ಇದ್ದರು.

ಅಶೋಕ ಶಿರಹಟ್ಟಿ, ಎನ್.ಎಸ್. ಹಲಗೋಡದ, ಎನ್.ಎಂ. ಅರಳಿ, ಗಣಪತಿ ಪುಟ್ಟಪ್ಪನವರ ನಿರ್ವಹಿಸಿದರು.

## ಜ.ತೋಂ. ಶ್ರೀಮದರ್ಧನಾರಿಶ್ವರರ ಜಾತ್ರಾಮಹೋತ್ಸವದಲ್ಲಿ ತೋಂ. ಸಿದ್ದರಾಮ ಶ್ರೀಗಳು

# ಉತ್ತಮ ಸಂಸ್ಕಾರ ಹೊಂದುವುದು ಮುಖ್ಯ



■ವಿಜಯಸಾಕ್ಷಿ ಸುದ್ದಿ, ಡಂಬಳ

ಕೃಷಿ ಕಾಯಕ ಅತ್ಯಂತ ಶ್ರೇಷ್ಠವಾಗಿದೆ. ಕೃಷಿ ಕಾಯಕ ಮಾಡುವವರ ತನು–ಮನ–ಭಾವನೆಗಳು ಶುದ್ಧವಾಗಿರುತ್ತವೆ. ಹಾಗಾಗಿಯೇ ಅವರು ಶ್ರೇಷ್ಠರು ಎಂದು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ಡಂಬಳ ಗ್ರಾಮದ ಆರಾಧ್ಯ ದೇವರಾದ ಜಗದ್ಗುರು ತೆ–ೂಂಟದ ಶ್ರೀಮದರ್ಧನಾರಿಶ್ವರರ 284ನೇ ಜಾತ್ರಾಮಹೋತ್ಸವದಲ್ಲಿ ಮಹಾರಥೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಸತ್ಯ ಶುದ್ಧವಾಗಿರುವ ರೀತಿಯಲ್ಲಿ ಕಾಯಕ ಮಾಡಿದಾಗ ಮಾತ್ರ ಅವರ ಬದುಕು ಉತ್ತಮವಾಗಿರುತ್ತದೆ. ಆ ಹಿನ್ನಲೆಯಲ್ಲಿ ನಮ್ಮ ಗುರುಗಳಾದ ಲಿಂ.ಡಾ.ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು ತಾವೇ ಸ್ವತಃ ಕೃಷಿಯಲ್ಲಿ ತೊಡಗಿಸಿಕೊಂಡು ಈ ಭಾಗದಲ್ಲಿ ಕೃಷಿಗೆ, ತೋಟಗಾರಿ–ಕೆಗೆ ಆದ್ಯತೆ ನೀಡಿದರು. ಆಧುನಿಕ ಜಗತ್ತಿಗೆ ಕಟ್ಟುಬಿದ್ದಿರುವ ಮನುಷ್ಯನಲ್ಲಿ ಮಾನವೀಯ ಮೌಲ್ಯಗಳನ್ನು ರೂಢಿಸಿಕೊಳ್ಳವುದು ಮತ್ತು ಉತ್ತಮ ಸಂಸ್ಕಾರ ಹೊಂದುವುದು ಮುಖ್ಯ ಎಂದು ಹೇಳಿದರು.

ಹೈದರಾಬಾದ ಸಿಂಹಸನಾರೂಢ ಮಹಾಸ್ವಾಮಿಗಳು ಮಾತನಾಡಿ, ರಥೋತ್ಸವ ಒಗ್ಗಟ್ಟಿಗೆ ಕಾರಣವಾಗಿದೆ. ನಮ್ಮ ಮನಸ್ಸು ಶುದ್ಧವಾಗಬೇಕಾದರೆ ಜಾತ್ರಾ ಮಹೋತ್ಸವಗಳಲ್ಲಿ ಪಾಲ್ಗೊಳ್ಳುವುದರ ಮೂಲಕ ಶರಣರ, ಗುರು–ಹಿರಿಯರ ಮಾತುಗಳನ್ನು ಆಲಿಸಿದಾಗ ನಮ್ಮನ್ನು ಉತ್ತಮ ಹಾದಿಯಲ್ಲಿ ನಡೆಯುವಂತೆ ಮಾಡುತ್ತವೆ. ಆ ಹಿನ್ನೆಲೆಯಲ್ಲಿ ಪ್ರತಿಯೊಬ್ಬರೂ ಸದ್ವಿಚಾರಗಳಲ್ಲಿ ತೊಡಗಿಸಿಕೊಳ್ಳಿ ಎಂದು ಹೇಳಿದರು.

ಕೆಎಸ್‌ಎಮ್‌ಸಿಎಲ್ ಅಧ್ಯಕ್ಷ, ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಮಾತನಾಡಿ, ಜಾತ್ರಾ ಮಹೋತ್ಸಗಳು ಪ್ರತಿಯೊಬ್ಬರೂ ಉತ್ಕೃಷ್ಟವಾದ ದಾರಿಯಲ್ಲಿ ಸಾಗಲು ಪ್ರೇರಣೆಯಾಗಿವೆ. ಲಿಂ ಡಾ.ತೋಂಟದ ಸಿದ್ದಲಿಂಗ ಶ್ರೀಗಳು ಈ ಭಾಗದಲ್ಲಿ ನೀರಾವರಿಯಾಗುಬೇಕೆನ್ನುವುದು ಮಹದಾಸೆ ಹೊಂದಿದ್ದರು. ಆ ಹಿನ್ನೆಲೆಯಲ್ಲಿ ಇವತ್ತು ನೀರಾವರಿಯಾಗುವುದರ ಮೂಲಕ ರೈತರು ಆರ್ಥಿಕ ಪ್ರವಾಹಿನಿಗೆ ಬರಲು ಕಾರಣವಾಗಿದೆ. ಮುಂದಿನ ದಿನಮಾನಗಳಲ್ಲಿ ಈ ಭಾಗದಲ್ಲಿರುವ ಕೆರೆಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಲಿಂ ಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಈ ಮಠಕ್ಕೆ ಶ್ರೀಗಳಾಗಿ ಬಂದಾಗ ಮಠ ಬಹಳ ತೊಂದರೆಯಲ್ಲಿತ್ತು. ಅವರ ದೂರದೃಷ್ಟಿಯಿಂದ ಮಠದ ಜಮೀನಿನಲ್ಲಿ ತಾವೇ ಸ್ವತಃ ಬಾವಿಯನ್ನು ತೆಗೆದು ದಾಳಿಂಬೆ, ಮಾವು, ಬಾರಿಹಣ್ಣು ಗಿಡಗಳನ್ನು ಬೆಳೆಯುವುದರ ಮೂಲಕ ಈ ಭಾಗದ ನೂರಾರು ಕೃಷಿಕರಿಗೆ ಪ್ರೇರಣೆಯಾದರು. ಈ ಭಾಗದ ರೈತರು ಹಲವಾರು ಹಣ್ಣಿನ ಗಿಡಗಳ ತೋಟಗಳನ್ನು ಹೊಂದಿದ್ದಾರೆ. ಲಿಂ.ಡಾ.ತೋಂಟದ ಸಿದ್ಧಲಿಂಗಶ್ರೀಗಳು, ಹುಲಗುಡ್ಡ ಏತನೀರಾವರಿ ಮೂಲಕ ನಿಮಗೆ ನೀರು ಬಂದಿದೆ, ನೀರನ್ನು ತುಪ್ಪದಂತೆ ಬಳಸಿ, ತುಪ್ಪವನ್ನು ನೀರಿನಂತೆ ಬಳಸಿ ಎಂದು ರೈತರಿಗೆ ಕಿವಿಮಾತು ಹೇಳಿದ್ದರು ಎಂದರಲ್ಲದೆ, 40 ವರ್ಷದಲ್ಲಿ ನಡೆದು ಬಂದ ದಾ–ರಿಯ ಕುರಿತು ಸುದೀರ್ಘವಾಗಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಕೆಸಿಸಿ ಬ್ಯಾಂಕ್ ಅಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ್, ಗ್ರಾ.ಪಂ ಅಧ್ಯಕ್ಷೆ ಶಿವಲೀಲಾ ಬಂಡಿಹಾಳ, ಬಸವಂತಪ್ಪ ಪಟ್ಟಣಶೆಟ್ಟರ, ಶಂಕರಗೌಡ ಜಾಯನಗೌಡರ, ಜಾತ್ರಾ ಸಮಿತಿ ಅಧ್ಯಕ್ಷ ಬಸುರಾಜ ಹಮ್ಮಿಗಿ, ಉಪಾಧ್ಯಕ್ಷ ಭೀಮಪ್ಪ ಗದಗಿನ, ಕಾರ್ಯದರ್ಶಿ ಅಶೋಕ ಮಾನೆ, ಖಜಾಂಚಿ ಮಲ್ಲಣ್ಣ ರೇವಡಿ, ಜಾತ್ರಾ ಸಮಿತಿಯ ಸದಸ್ಯರು, ಭಕ್ತರು ಇದ್ದರು.


## ನಿಧನ ವಾರ್ತೆ

### ನಿಂಗಪ್ಪ ಜಾಲವಾಡಗಿ



ಲಕ್ಷ್ಮೇಶ್ವರ: ತಾಲೂಕಿನ ಬಾಲೆಹೊಸೂರ ಗ್ರಾಮದ ನಿವಾಸಿ, ತಾಪಂ ಮಾಜಿ ಸದಸ್ಯ ನಿಂಗಪ್ಪ ಹೆಚ್ ಜಾಲವಾಡಗಿ(69) ಇವರು ಸೋಮವಾರ ನಿಧನ ಹೊಂದಿದರು. ಮೃತರಿಗೆ ಪತ್ನಿ, ಪುತ್ರ, ಪುತ್ರಿ ಸೇರಿ ಅಪಾರ ಬಂಧು ಬಳಗವಿದೆ.

### ಕಳಕಪ್ಪ ನಿಂಗಪ್ಪ ಮಾದಿ



ಗಜೇಂದ್ರಗಡ: ಪಟ್ಟಣದ ನವನಗರದ ನಿವಾಸಿ ಕಳಕಪ್ಪ ನಿಂಗಪ್ಪ ಮಾದಿ (88) ಸೋಮವಾರ ನಿಧನರಾದರು. ಮೃತರು ಮೂವರು ಪುತ್ರರು ಹಾಗೂ ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.



■ವಿಜಯಸಾಕ್ಷಿ ಸುದ್ದಿ, ನರಗುಂದ

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.5ರಲ್ಲಿ ಇತ್ತೀಚೆಗೆ 7ನೇ ತರಗತಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಬಿಳ್ಕೊಡುಗೆ ಸಮಾರಂಭದಲ್ಲಿ ಶಾಲೆಯ ಹಳೆಯ ವಿದ್ಯಾರ್ಥಿನಿ ಸಾನಿಯಾ ಬಾಬುಸಾಬ ಯಲಿಗಾರ ಇವರು ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಅತೀ ಹೆಚ್ಚು ಅಂಕ ಪಡೆದುಕೊಂಡು ಶಾಲೆಗೆ ಕೀರ್ತಿ ತಂದಿದ್ದಕ್ಕಾಗಿ ಸನ್ಮಾನಿಸಲಾಯಿತು. ಈ ವೇಳೆ ಶಿಕ್ಷಕರಾದ ಕೆಂಚನಗೌಡ್ರ, ಧೋತ್ರದ, ರಾಯನಗೌಡ್ರ, ಭೋಗರ್, ಪಥಂಗಿ ಮುಂತಾದವರಿದ್ದರು.

### ಜನ ಜಾಗೃತಿ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಅರಿತು ಬಾಳಿದರೆ ಬಾಳು ಬಂಗಾರ



■ವಿಜಯಸಾಕ್ಷಿ ಸುದ್ದಿ, ಭದ್ರಾವತಿ

ಬದುಕು ಭಗವಂತನ ಕೊಡುಗೆ. ಅರಿವು-ಆದರ್ಶಗಳಿಂದ ಬದುಕು ಸಮೃದ್ಧಿಗೊಳ್ಳಬೇಕು. ಸುಖ, ಶಾಂತಿದಾಯಕ ಬದುಕಿಗೆ ಧರ್ಮ ಪರಿಪಾಲನೆ ಅಗತ್ಯವಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ತಾಲೂಕಿನ ಕೂಡ್ಲಿಗೆರೆ ಗ್ರಾಮದಲ್ಲಿ ಜರುಗಿದ ಅಡ್ಡಪಲ್ಲಕ್ಕಿ ಮಹೋತ್ಸವ ಅಂಗವಾಗಿ ನಡೆದ ಜನ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಧರ್ಮದಲ್ಲಿರುವ ಉದಾತ್ತ ತತ್ವಗಳು ಜೀವನದ ಶ್ರೇಯಸ್ಸಿಗೆ ಕಾರಣವಾಗಿವೆ. ಅರಿತು ಬಾಳಿದರೆ ಬಾಳು ಬಂಗಾರ. ಮರೆತು ಮಲಗಿದರೆ ಬಾಳು ಬಂಧನಕಾರಿ. ಬದುಕು ಬದಲಾಗಬೇಕಾದರೆ ಬದುಕುವ ದಾರಿ ಬದಲಾಗಬೇಕು. ಬಾಳೆಗೊಂದು ಗೊನೆಯಿರುವಂತೆ ಬಾಳಿಗೊಂದು ಗುರಿಯಿರಬೇಕು. ಗುರಿಯಿಲ್ಲದ, ಗುರಿ ಸಾಧಿಸದ ಜೀವನ ವ್ಯರ್ಥ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸಾದಿ ಧ್ಯಾನ ಪರ್ಯಂತರವಾದ ದಶಧರ್ಮ ಸೂತ್ರಗಳು ಸಕಲರ ಬಾಳಿಗೆ ಬೆಳಕು ತೋರಿವೆ. ವೀರಶೈವ ಧರ್ಮ ಸಕಲ ಜೀವಾತ್ಮರಿಗೆ ಸದಾ ಒಳಿತನ್ನೇ ಬಯಸುವ ಉದಾತ್ತ ಗುರಿ ಹೊಂದಿದೆ ಎಂದ ಅವರು, ತತ್ವ ತ್ರಯಗಳನ್ನು ಮನುಷ್ಯ ಆಚರಿಸಿ ಜೀವನದಲ್ಲಿ ಉನ್ನತಿಯನ್ನು ಕಾಣಬೇಕಾಗಿದೆ. ಕೂಡ್ಲಿಗೆರೆ ಗ್ರಾಮದಲ್ಲಿ ನಿರ್ಮಿಸಿದ ನೂತನ ಶ್ರೀ ಬಸವೇಶ್ವರಸ್ವಾಮಿ ಸುಂದರ ದೇವಾಲಯ ಕಂಡು ತುಂಬಾ ಸಂತೋಷವಾಗಿದೆ ಎಂದರು.

ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ ಸಮಾರಂಭ ಉದ್ಘಾಟಿಸಿ ಮಾತನಾಡಿ, ಧರ್ಮಾಚರಣೆ ಇಲ್ಲದಿದ್ದರೆ ಜೀವನದಲ್ಲಿ ಶಾಂತಿ ಕಾಣದು. ನೆಮ್ಮದಿಯ ಆದರ್ಶ ಬದುಕಿಗೆ ಧರ್ಮವೊಂದೇ ಆಶಾಕಿರಣ ಎಂದರು. ಎಡೆಯೂರು ರೇಣುಕ ಶಿವಾಚಾರ್ಯರು, ಮಳಲಿ ಮಠದ ಡಾ. ನಾಗಭೂಷಣ ಶಿವಾಚಾರ್ಯರು, ಬಿಳಕಿ ರಾಚೋಟೇಶ್ವರ ಶಿವಾಚಾರ್ಯರು, ಚನ್ನಗಿರಿ ಕೇದಾರ ಶಿವಶಾಂತವೀರ ಶಿವಾಚಾರ್ಯರು, ತಾವರೆಕೆರೆ ಡಾ. ಅಭಿನವ ಸಿದ್ಧಲಿಂಗ ಶಿವಾಚಾರ್ಯರು ಪಾಲ್ಗೊಂಡು ಉಪದೇಶಾಮೃತವನ್ನಿತ್ತರು.

ಶಿಲ್ಪಿಗಳಿಗೆ, ದೇವಸ್ಥಾನ ಗೋಪುರ-ಕಟ್ಟಡ ನಿರ್ಮಾಣಕಾರರಿಗೆ, ಮರದ ಕೆಲಸಗಾರರಿಗೆ, ದಾನಿಗಳಿಗೆ, ಗಣ್ಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಆಶೀರ್ವದಿಸಿದರು. ಚಿಕ್ಕಮಗಳೂರಿನ ಚಂದ್ರಶೇಖರ ನಾರಣಾಪುರ ಉಪನ್ಯಾಸವನ್ನಿತ್ತರು. ಗಂಜಿಗಟ್ಟಿ ಕೃಷ್ಣಮೂರ್ತಿ ಇವರಿಂದ ಭಕ್ತಿ ಗೀತೆ ಜರುಗಿತು. ಶಿವಮೊಗ್ಗದ ಶಾಂತಾ ಆನಂದ ನಿರೂಪಿಸಿದರು.

ಸಮಾರಂಭಕ್ಕೂ ಮುನ್ನ ಜರುಗಿದ ಶ್ರೀ ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವದಲ್ಲಿ ಆರತಿ ಹಿಡಿದ ಮುತ್ತೈದೆಯರು, ಕುಂಭ ಹೊತ್ತ ಮಹಿಳೆಯರು ಪಾಲ್ಗೊಂಡಿದ್ದರು. ಸಕಲ ಬಿರುದಾವಳಿಗಳೊಂದಿಗೆ, ವಿವಿಧ ವಾದ್ಯ ವೈಭವಗಳೊಂದಿಗೆ ಚನ್ನಗಿರಿ ರಸ್ತೆಯ ಶ್ರೀ ಹರಿಹರೇಶ್ವರ ಮಹಾದ್ವಾರದಿಂದ ಕೂಡ್ಲಿಗೆರೆಯ ರಾಜಬೀದಿಗಳಲ್ಲಿ ಸಂಚರಿಸಿದ ಉತ್ಸವ ಶ್ರೀ ಬಸವೇಶ್ವರ ದೇವಾಲಯವನ್ನು ತಲುಪಿತು. ಕೂಡ್ಲಿಗೆರೆ ಶ್ರೀ ಬಸವೇಶ್ವರಸ್ವಾಮಿ ದೇವಸ್ಥಾನ ಜೀರ್ಣೋದ್ಧಾರ ಸೇವಾ ಸಮಿತಿಯವರಿಂದ ಪ್ರಸಾದ ಸೇವೆ ಜರುಗಿತು.

# ಇಂದು ಜೆಡಿಎಸ್‌ನಿಂದ 'ಉಲ್ಟಾ ಪಾದಯಾತ್ರೆ'




■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಕಾಂಗ್ರೆಸ್ ಸರಕಾರ ಶಕ್ತಿ ಯೋಜನೆಯಡಿ ಮಹಿಳೆಯರಿಗೆ ನೀಡಿದ ಉಚಿತ ಬಸ್ ಸೇವೆಯಿಂದ ವಿದ್ಯಾರ್ಥಿಗಳಿಗೆ ತೊಂದರೆ ಆಗುತ್ತಿದ್ದು, ಮುಂಬರುವ ಪರೀಕ್ಷೆಗೆ ಹಾಜರಾಗದೆ ಹೋದಲ್ಲಿ ಇದಕ್ಕೆ ಕಾಂಗ್ರೆಸ್ ಪಕ್ಷವೇ ಕಾರಣ ಎಂದು ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಗೋವಿಂದಗೌಡ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಾಂಗ್ರೆಸ್ ಸರಕಾರ ಬಜೆಟ್‌ನಲ್ಲಿ ಗದಗ ಜಿಲ್ಲೆಗೆ 20 ಕೋಟಿ ರೂ ಅನುದಾನ ನೀಡಿದೆ. ಆದರೆ ಗದಗ ಜಿಲ್ಲೆಯಿಂದ ಸರಕಾರಕ್ಕೆ 400-500 ಕೋಟಿ ರೂ ತೆರಿಗೆ ಹಣ ಸಂಗ್ರಹವಾಗುತ್ತದೆ. ಈ ಬಜೆಟ್‌ನಲ್ಲಿ ಘೋಷಣೆ ಆಗಿದ್ದು ಕೇವಲ 20 ಕೋಟಿ ರೂ. ಅದಕ್ಕಾಗಿ ನಮ್ಮ ಜಿಲ್ಲೆಯಿಂದ 'ನಮ್ಮ ತೆರಿಗೆ-ನಮ್ಮ ಹಕ್ಕು' ಎಂದು ಫೆ.27ರಂದು ಬೆಳಿಗ್ಗೆ 10.30ಕ್ಕೆ ಉಲ್ಟಾ ಪಾದಯಾತ್ರೆಯನ್ನ ನಗರದ ಗಾಂಧಿ ವೃತ್ತದಿಂದ ತಹಸೀಲ್ದಾರ ಕಛೇರಿವರೆಗೆ ನಡೆಸಿ ತಹಸೀಲ್ದಾರರ ಮುಖಾಂತರ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಗುವುದು ಎಂದ ಅವರು, ರಾಜ್ಯದಲ್ಲಿ ಬರ ಪರಿಸ್ಥಿತಿ ಎದುರಾಗಿದ್ದು, ಸರಕಾರ ನೀರಿಗಾಗಿ ಪೂರ್ವ ಸಿದ್ಧತೆ ಮಾಡಿಕೊಂಡಿಲ್ಲವಾದ್ದರಿಂದ ನೀರಿಗಾಗಿ ಹಾಹಾಕಾರ ನಿರ್ಮಾಣವಾಗಿದೆ ಎಂದು ವೆಂಕನಗೌಡ ಗೋವಿಂದಗೌಡ ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಬಸವರಾಜ ಅಪ್ಪಣ್ಣವರ, ದೇವಪ್ಪ ಮಲ್ಲಸಮುದ್ರ, ಪ್ರಫುಲ್ ಪುಣೇಕರ್, ಎಂ.ಎಸ್. ಪರ್ವತಗೌಡ ಸೇರಿದಂತೆ ಮುಂತಾದವರಿದ್ದರು.

### ಕ್ಲಾಥ್ ಮರ್ಚಂಟ್ಸ್ ಅಸೋಸಿಯೇಶನ್‌ದ ಸೆಮಿನಾರ್‌ದಲ್ಲಿ ಆನಂದ ಪೋತ್ನೀಸ್ ಅಭಿಮತ

# ದೇಶದ ಅಭಿವೃದ್ಧಿಯಲ್ಲಿ ಎಂಎಸ್‌ಎಂಇ ಪಾತ್ರ ಮಹತ್ವದ್ದು



■ವಿಜಯಸಾಕ್ಷಿ ಸುದ್ದಿ, ಗದಗ

ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಅಭಿವೃದ್ಧಿ ಕಾಯಿದೆ-2006ರ ಪ್ರಕಾರ, ಒಪ್ಪಿದ ನಿಯಮಗಳ ಪ್ರಕಾರ ಅಥವಾ ಗರಿಷ್ಠ 45 ದಿನಗಳ ಪ್ರಕಾರ ಎಂ.ಎಸ್.ಎಂ.ಇ (ಮೈಕ್ರೋ, ಸ್ಮಾಲ್ ಆ್ಯಂಡ್ ಮೀಡಿಯಂ ಎಂಟರ್‌ಪ್ರೈಸಿಸ್)ಗಳಿಗೆ ಪಾವತಿ ಮಾಡಲು ವಿಫಲರಾದ ಯಾವುದೇ ಖರೀದಿದಾರರು ಆರ್‌ಬಿಐ ಸೂಚಿಸಿದ ಬ್ಯಾಂಕ್ ದರಕ್ಕಿಂತ ಮೂರು ಪಟ್ಟು ಮಾಸಿಕ ಸಂಯುಕ್ತ ಬಡ್ಡಿಯನ್ನು ಪಾವತಿಸಲು ಜವಾಬ್ದಾರರಾಗಿರುತ್ತಾರೆ ಎಂದು ಗದುಗಿನ ಹಿರಿಯ ಚಾರ್ಟರ್ಡ್ ಅಕೌಂಟಂಟ್ ಆನಂದ ಪೋತ್ನೀಸ್ ಹೇಳಿದರು.

ಅವರು ಗದುಗಿನ ಅರಿಹಂತ ಪ್ಲಾಜಾದಲ್ಲಿ ಗದಗ ಜಿಲ್ಲಾ ಕ್ಲಾಥ್ ಮರ್ಚಂಟ್ಸ್ ಅಸೋಶಿಯೇಶನ್ ಏರ್ಪಡಿಸಿದ್ದ ಎಂ.ಎಸ್.ಎಂ.ಇ ಕುರಿತಾದ ಸೆಮಿನಾರ್ ಉದ್ದೇಶಿಸಿ ವ್ಯಾಪಾರಸ್ಥರಿಗೆ ಮಾಹಿತಿ ನೀಡಿದರು.

ಇನ್ನೋರ್ವ ಚಾರ್ಟರ್ಡ್ ಅಕೌಂಟಂಟ್ ಬೆಂಗಳೂರಿನ ನರೇಂದ್ರ ಜೈನ್ ಮಾತನಾಡಿ, ಸೂಕ್ಷ್ಮ ಉದ್ಯಮ-ಸ್ಥಾವರ ಮತ್ತು ಯಂತ್ರೋಪಕರಣಗಳು ಅಥವಾ ಸಲಕರಣೆಗಳಲ್ಲಿನ ಹೂಡಿಕೆಯು ಒಂದು ಕೋಟಿ ರೂಪಾಯಿಗಳನ್ನು ಮೀರದ ಮತ್ತು ವಹಿವಾಟು ಐದು ಕೋಟಿ ರೂಪಾಯಿ ಒಳಗಿರುವ, ಸಣ್ಣ ಉದ್ಯಮ-ಸ್ಥಾವರ ಮತ್ತು ಯಂತ್ರೋಪಕರಣಗಳು ಅಥವಾ ಸಲಕರಣೆಗಳಲ್ಲಿನ ಹೂಡಿಕೆಯು ಹತ್ತು ಕೋಟಿ ರೂಪಾಯಿಗಳನ್ನು ಮೀರದ ಮತ್ತು ವಹಿವಾಟು ಐವತ್ತು ಕೋಟಿ ರೂಪಾಯಿ ಒಳಗಿರುವ, ಮಧ್ಯಮ ಉದ್ಯಮ-ಸ್ಥಾವರ ಮತ್ತು ಯಂತ್ರೋಪಕರಣಗಳು ಅಥವಾ ಸಲಕರಣೆಗಳಲ್ಲಿನ ಹೂಡಿಕೆಯು ಐವತ್ತು ಕೋಟಿ ರೂಪಾಯಿಗಳನ್ನು ಮೀರದ ಮತ್ತು ವಹಿವಾಟು ಇನ್ನೂರೈವತ್ತು ಕೋಟಿ ರೂಪಾಯಿ ಮೀರದಂತಿರುವ ಹೀಗೆ ಮೂರು ಹಂತಗಳಲ್ಲಿ ವಿಂಗಡಿಸಲಾಗಿದೆ ಎಂದು ವಿವರಣೆ ನೀಡಿದರು.

ವ್ಯವಹಾರದಲ್ಲಿ ಒಪ್ಪಂದ ಆಗಿದ್ದರೆ 45 ದಿನ, ಒಪ್ಪಂದ ಆಗದಿದ್ದರೆ 15 ದಿನಗಳೊಳಗೆ ಹಣ ಪಾವತಿಸಬೇಕು ಎಂಬುದನ್ನೇ ಸರಳವಾಗಿ ತಿಳಿಯಬೇಕಷ್ಟೇ. ದೇಶದ ಆರ್ಥಿಕ ಅಭಿವೃದ್ಧಿಯಲ್ಲಿ ಎಂಎಸ್‌ಎಂಇ ಮಹತ್ವದ ಪಾತ್ರವನ್ನು ವಹಿಸಿದೆ ಎಂದು ಆನಂದ ಪೋತ್ನೀಸ್ ತಿಳಿಸಿದರು.

ವ್ಯಾಪಾರಸ್ಥರ ಸಂದೇಹದ ಪ್ರಶ್ನೆಗಳಿಗೆ ಪೋತ್ನೀಸ್ ಹಾಗೂ ಜೈನ್ ಅವರು ಕಾಯ್ದೆ ಚೌಕಟ್ಟಿನೊಳಗೆ ಇರುವ ನಿಖರ ಮಾಹಿತಿ ನೀಡಿ ಸಂದೇಹಗಳಿಗೆ ಉತ್ತರಿಸಿದರು. ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಕ್ಲಾಥ್ ಮರ್ಚಂಟ್ಸ್ ಅಸೋಸಿಯೇಶನ್ ಅಧ್ಯಕ್ಷ ಸುರೇಶ ಬನ್ಸಾಲಿ ಮಾತನಾಡಿದರು. ಅಸೋಸಿಯೇಶನ್ ಕಾರ್ಯದರ್ಶಿ ಹೀರಾಚಂದ ಸಿಮ್ಲಾನಿ ಸ್ವಾಗತಿಸಿದರು. ಮನೀಶ್ ಬನ್ಸಾಲಿ ನಿರೂಪಿಸಿದರು. ಖಜಾಂಚಿ ಮಹಾವೀರ ಸೋಳಂಕಿ ವಂದಿಸಿದರು.

ಕಾರ್ಯಕ್ರಮದಲ್ಲಿ ಬಾಬುಲಾಲ ಬನ್ಸಾಲಿ, ಸುರೇಶ ಓಸ್ವಾಲ, ಸಾವಲಚಂದ್ ಜೈನ್, ರಮೇಶ ಬನ್ಸಾಲಿ, ದೀಪಕ ಬಾಫಣಾ, ಮೋಹನ ಪವಾರ, ಹರೀಶ ಜೋತವಾನಿ, ವ್ಹಿ.ಎಂ. ಖಟವಟೆ, ಮಂಜುನಾಥ ಚನ್ನಪ್ಪನವರ, ಧೀರಜ್ ಪಾಲರೇಚಾ, ರಾಜೇಂದ್ರ ಜೈನ್, ರಾಮಕೃಷ್ಣ ಕಾಟೀಗರ, ಮಂಜುನಾಥ ಬಸವಾ, ರಮೇಶ ಬನ್ಸಾಲಿ ಸೇರಿದಂತೆ ಗದಗ ಮಾರ್ಕೆಟ್‌ನ ಗಣ್ಯ ವ್ಯಾಪಾರಸ್ಥರು ಪಾಲ್ಗೊಂಡಿದ್ದರು.

### ಅಗ್ನಿ ಅನಾಹುತ ತಡೆಗಟ್ಟುವ ದಿನಾಚರಣೆಯ ಅಂಗವಾಗಿ ಅಗ್ನಿಶಾಮಕ ಇಲಾಖೆಯಿಂದ ಪ್ರಾತ್ಯಕ್ಷಿಕೆ

# ಅಗ್ನಿ ಅನಾಹುತಗಳಿಂದ ಧೈರ್ಯಗುಂದದಿರಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಗ್ನಿ ಆಕಸ್ಮಿಕಗಳು ಸಂಭವಿಸಿದಾಗ ಅದರಲ್ಲಿ ಸಿಲುಕಿದವರನ್ನು ರಕ್ಷಿಸುವಲ್ಲಿ ಆ ಜಾಗದಲ್ಲಿರುವ ವಿದ್ಯಾರ್ಥಿಗಳಾಗಲಿ, ಸಾರ್ವಜನಿಕರಾಗಲಿ ಹೇಗೆ ವರ್ತಿಸಬೇಕು ಮತ್ತು ಅದರಿಂದ ರಕ್ಷಣೆ ಮಾಡುವ ಬಗೆ ಹೇಗೆ ಎಂದು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡುವ ಉದ್ದೇಶದಿಂದ ಅನೇಕ ಶಿಕ್ಷಣ ಸಂಸ್ಥೆಗಳಲ್ಲಿ ಇಂತಹ ಪ್ರಾತ್ಯಕ್ಷಿತೆಯನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಅಗ್ನಿಶಾಮಕ ಇಲಾಖೆ ಠಾಣಾಧಿಕಾರಿ ಎಸ್.ವೈ. ಪಾಟೀಲ ಹೇಳಿದರು.

ಅವರು ಸಮೀಪದ ಅಡರಕಟ್ಟಿ ಗ್ರಾಮದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳು ಇಲಾಖೆ ಲಕ್ಷ್ಮೇಶ್ವರ ಘಟಕದಿಂದ ಅಗ್ನಿ ಅನಾಹುತ ತಡೆಗಟ್ಟುವ ದಿನಾಚರಣೆಯ ಅಂಗವಾಗಿ ಅಗ್ನಿಶಾಮಕ ಇಲಾಖೆಯಿಂದ ಪ್ರಾತ್ಯಕ್ಷಿಕೆ/ಅಣಕು ಪ್ರದರ್ಶನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಯಾವುದೇ ರೀತಿಯ ಅಪಾಯ ಸಂಭವಿಸಿದಲ್ಲಿ ವಿದ್ಯಾರ್ಥಿಗಳು ಧೈರ್ಯ ಕಳೆದುಕೊಳ್ಳದೆ ಅದರಿಂದ ಪಾರಾಗುವ ರೀತಿಯನ್ನು ತಿಳಿದುಕೊಂಡಲ್ಲಿ ಅನೇಕ ಸಂದರ್ಭಗಳಲ್ಲಿ ತಮ್ಮ ಹಾಗೂ ಇತರರ ಜೀವ ರಕ್ಷಣೆ ಮಾಡಿಕೊಳ್ಳಲು ಸಹಾಯಕವಾಗಲಿದೆ ಎಂದು ಹೇಳಿದರು.

ಪ್ರಥಮ ಹಂತದಲ್ಲಿ ಶಾಲೆಯ ಕೊಠಡಿಯಲ್ಲಿ ಶಾಲಾ ಮಕ್ಕಳಿಗೆ ಅಗ್ನಿ ಅನಾಹುತ ತಡೆಗಟ್ಟುವ ಕುರಿತು ಇಲಾಖೆ ಸಿಬ್ಬಂದಿ ಎಂ.ಎಚ್. ಕಡ್ಡಿಪೂಜಾರ ತಿಳಿಸಿದರು. ಎಸ್‌ಡಿಎಂಸಿ ಸದಸ್ಯ ಕುಮಾರ ಚಕ್ರಸಾಲಿ ಮಾತನಾಡಿ, ಅಗ್ನಿ ಅನಾಹುತಗಳು ಹಾಗೂ ತುರ್ತು ಸಂದರ್ಭದಲ್ಲಿ ತಕ್ಷಣ ಪರಿಹಾರವನ್ನು ಕಂಡುಕೊಳ್ಳುವುದರ ಬಗ್ಗೆ ಈ ವೇದಿಕೆಯು ಶಾಲಾ ಮಕ್ಕಳಿಗೆ ನೆರವಾಗಲಿದೆ ಎಂದು ಹೇಳಿದರು. ನಂತರ ಶಾಲೆಯ ಎಲ್ಲಾ ಮಕ್ಕಳು ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಶಾಲಾ ಆವರಣದಲ್ಲಿ ಅಗ್ನಿ ಅನಾಹುತಗಳು ಹಾಗೂ ಅದನ್ನು ತಡೆಗಟ್ಟುವ ಕುರಿತು ಪ್ರಾತ್ಯಕ್ಷಿಕೆ/ಅಣಕು ಪ್ರದರ್ಶನ ಮಾಡಲಾಯಿತು. ಈ ಸಂದರ್ಭದಲ್ಲಿ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ಲಕ್ಷ್ಮೇಶ್ವರ ಘಟಕದ ಸಿಬ್ಬಂದಿ ವರ್ಗ, ಶಾಲೆಯ ಸಿಬ್ಬಂದಿ ವರ್ಗ, ಎಸ್‌ಡಿಎಂಸಿಯ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

ಮುಖ್ಯೋಪಾಧ್ಯಾಯ ಎಸ್.ಹೆಚ್. ಉಮಚಗಿ ಸ್ವಾಗತಿಸಿದರು. ಡಿ.ಡಿ. ಲಮಾಣಿ ನಿರೂಪಿಸಿದರು. ಎಸ್.ಕೆ. ಅಮ್ಮಿನಭಾವಿ ವಂದಿಸಿದರು.



# ಎಲ್ಲ ಗ್ರಂಥಗಳು ಮನುಷ್ಯನ ಏಳ್ಗೆಯನ್ನು ಬಯಸಿವೆ



■ವಿಜಯಸಾಕ್ಷಿ ಸುದ್ದಿ, ರೋಣ

ಸಾಮೂಹಿಕ ವಿವಾಹಗಳನ್ನು ನೆರವೇರಿಸುವದರಿಂದ ಬಡವರಿಗೆ ಅನುಕೂಲವಾಗಲಿದೆ ಎಂದು ಹೊಸಳ್ಳಿ ಶ್ರೀಮಠದ ಬೂದೇಶ್ವರ ಶ್ರೀಗಳು ಹೇಳಿದರು.

ಅವರು ಸೋಮವಾರ ಪಟ್ಟಣದ ಆಝಾದ ಯುವಕ ಸಂಘ ಹಾಗೂ ತಲಾಬಕಟ್ಟಾ ಮಕಾನ್ ಕಮಿಟಿ ಇವರ ಆಶ್ರಯದಲ್ಲಿ ಹಜರತ್ ಮಹ್ಮದ್ ಪೈಗಂಬರವರ ಜನ್ಮದಿನೋತ್ಸವ ಅಂಗವಾಗಿ ಜರುಗಿದ ಸರ್ವಧರ್ಮ ಸಾಮೂಹಿಕ ವಿವಾಹ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸಾಮೂಹಿಕ ವಿವಾಹಗಳು ಆರ್ಥಿಕ ಹೊರೆಯನ್ನು ತಪ್ಪಿಸುವುದಲ್ಲದೆ ಮನುಷ್ಯನನ್ನು ಸಾಲದಿಂದ ದೂರಮಾಡುತ್ತವೆ ಎಂಬ ಸತ್ಯವನ್ನು ನಾವು ಅರಿಯಬೇಕು. ಮುಖ್ಯವಾಗಿ ಸಾಮೂಹಿಕ ವಿವಾಹದಂತಹ ಪುಣ್ಯ ಕಾರ್ಯದಲ್ಲಿ ಜಾತಿ-ಮತ-ಪಂಥಗಳಿಗೆ ಅವಕಾಶ ಇರುವುದಿಲ್ಲ. ಕಾರಣ, ಇಡೀ ಗ್ರಾಮ ಈ ಮಹತ್ತರ ಕಾರ್ಯದಲ್ಲಿ ಭಾಗಿಯಾಗಿರುತ್ತದೆ ಎಂದರು.

ಹಿಂದೂ, ಮುಸ್ಲಿಂ, ಕ್ರೈಸ್ತ ಇವರೆಲ್ಲರೂ ಕೂಡಿ ಬಾಳಿದಾಗ ಮಾತ್ರ ಸುಭದ್ರ ದೇಶ ಕಟ್ಟಲು ಸಾಧ್ಯ ಎಂಬ ಸಂದೇಶವನ್ನು ಮಾನವ ಕುಲ ಅರಿತುಕೊಳ್ಳಬೇಕು. ಯಾವುದೇ ಧರ್ಮದ ಗ್ರಂಥಗಳು ಕೆಟ್ಟದ್ದನ್ನು ಬೋಧಿಸಿಲ್ಲ. ಎಲ್ಲ ಗ್ರಂಥಗಳು ಮನುಷ್ಯನ ಏಳ್ಗೆಯನ್ನು ಬಯಸಿವೆ. ನಾಗರಿಕ ಸಮುದಾಯ ಈ ಸತ್ಯ ತಿಳಿದುಕೊಳ್ಳುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಗುರುಪಾದ ದೇವರು, ಸುಲೇಮಾನ್ ಶಾವಲಿ ಅಜ್ಜನವರು ನೇತೃತ್ವ ವಹಿಸಿದ್ದರು. ಶಫೀಕ ಮೂಗನೂರ ಪ್ರಾಸ್ತವಿಕ ಮಾತನಾಡಿದರು. ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ಯೂಸುಪ್ ಇಟಗಿ, ಭಾವಾಸಾಬ ಬೆಟಗೇರಿ, ವಿ.ಬಿ. ಸೋಮನಕಟ್ಟಿಮಠ, ನಾಶೀರಖಾನ್ ಪಠಾಣ, ಭರಮಗೌಡ ಲಿಂಗನಗೌಡ್ರ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ನಾಳೆ ವಿದ್ಯುತ್ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

110 ಕೆವಿ ಶಿರಹಟ್ಟಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ಫೆ. 28ರಂದು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುವುದರಿಂದ ಮುಂಜಾನೆ 10 ಗಂಟೆಯಿಂದ ಸಾಯಂಕಾಲ 6 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಸದರಿ ಉಪಕೇಂದ್ರದಿಂದ ಪೂರೈಕೆಯಾಗುವ ಎಲ್ಲಾ 11 ಕೆವ್ಹಿ ನಗರ, ಗ್ರಾಮೀಣ, ಕುಡಿಯುವ ನೀರಿನ ಸ್ಥಾವರಗಳು, ಕೈಗಾರಿಕಾ, ಸೋಲಾರ್ ಐ.ಪಿ.ಪಿ, ಮೆ: ಬಿ.ಪಿ.ಸಿ.ಎಲ್. ಎಲಿಶಿರೂರ ಇವರ ಗಾಳಿಯಂತ್ರ ಘಟಕಕ್ಕೆ ಮತ್ತು ನೀರಾವರಿ ಪಂಪ್‌ಸೆಟ್‌ಗಳ ವಿದ್ಯುತ್ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಸಾರ್ವಜನಿಕರು ಸದರಿ ಪ್ರಕಟಣೆ ಗಮನಿಸಿ ಕಂಪನಿಯೊಂದಿಗೆ ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

### ರಾಕೇಶ ಸಿದ್ದರಾಮಯ್ಯ ಟ್ರಸ್ಟ್‌ನ ಶೈಕ್ಷಣಿಕ ಸಂಕೀರ್ಣಗಳ ಭೂಮಿಪೂಜೆ ಕಾರ್ಯಕ್ರಮ

# ಶಿಕ್ಷಣವೊಂದೇ ಸಮಾಜವನ್ನು ಜಾಗೃತಗೊಳಿಸುವ ಸಾಧನ



■ವಿಜಯಸಾಕ್ಷಿ ಸುದ್ದಿ, ಗದಗ

ಯಾವುದೇ ಸಂಸ್ಥೆಯಾಗಿರಲಿ, ಸಮುದಾಯದ ಮಕ್ಕಳ ಬೆಳವಣಿಗೆಗೆ ಬೆನ್ನೆಲುಬಾಗಿ ನಿಲ್ಲಬೇಕು. ಶಿಕ್ಷಣ ಬೆಳೆದರೆ ಶಿಕ್ಷಣ ಸಂಸ್ಥೆಗಳು ಬೆಳೆಯುತ್ತವೆ ಎಂದು ಮಾಜಿ ಶಾಸಕ ಡಾ. ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಕರ್ನಾಟಕ ಪ್ರದೇಶ ಕುರುಬರ ಸಂಘದ ಜಿಲ್ಲಾ ಘಟಕ ಹಾಗೂ ರಾಕೇಶ್ ಸಿದ್ದರಾಮಯ್ಯ ಟ್ರಸ್ಟ್ ವತಿಯಿಂದ ನಗರದ ಕನಕ ಭವನದಲ್ಲಿ ಭಾನುವಾರ ಜರುಗಿದ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ರಾಕೇಶ ಸಿದ್ದರಾಮಯ್ಯ ಟ್ರಸ್ಟ್‌ನ ಶೈಕ್ಷಣಿಕ ಸಂಕೀರ್ಣಗಳ ಭೂಮಿಪೂಜೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ರಾಕೇಶ್ ಸಿದ್ದರಾಮಯ್ಯ ಟ್ರಸ್ಟ್‌ನಿಂದ ಕಳೆದ ಹಲವು ವರ್ಷಗಳಿಂದ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುತ್ತ ಬಂದಿದೆ. ಶಿಕ್ಷಣವೊಂದೇ ಸಮಾಜವನ್ನು ಜಾಗೃತಿ ಗೊಳಿಸುವ ಸಾಧನವಾಗಿದೆ. ಸಮಾಜದಲ್ಲಿ ಸಮಾನತೆ ತರಲು ಜಾತಿ ವ್ಯವಸ್ಥೆ ವಿರುದ್ಧ ಮೊದಲು ಹೋರಾಡಬೇಕು. ಮಾಧ್ಯಮ, ನ್ಯಾಯಾಲಯ ಮತ್ತು ಭಾಗಶಃ ಎಲ್ಲ ವಲಯಗಳಲ್ಲಿ ಪ್ರಬಲ ಸಮುದಾಯದವರಿದ್ದಾರೆ. ಸಾಮಾಜಿಕ ನ್ಯಾಯ ಒದಗಿಸಲು ಡಾ. ಬಿ.ಆರ್. ಅಂಬೇಡ್ಕರ್ ಸಂವಿಧಾನ ನೀಡಿದ್ದಾರೆ ಎಂದರು.

ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಆಯುಕ್ತ ಬಿ. ವೆಂಕಟೇಶ ಮಾತನಾಡಿ, ಆಡಳಿತದಲ್ಲಿ ಕೆಲಸ ಮಾಡಲು ಅವಕಾಶ ಇದ್ದಾಗ ಅಭಿವೃದ್ಧಿ ಕೆಲಸಗಳನ್ನು ಮಾಡಿಕೊಡಬೇಕು. ಈ ನಿಟ್ಟಿನಲ್ಲಿ ರಾಕೇಶ್ ಸಿದ್ದರಾಮಯ್ಯ ಟ್ರಸ್ಟ್ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತಿದೆ ಎಂದು ತಿಳಿಸಿದರು.

ಸರ್ಕಾರದ ವ್ಯವಸ್ಥೆಯಲ್ಲಿ ಸಾಮಾಜಿಕ ನ್ಯಾಯ ಒದಗಿಸಲು ಸಿಎಂ ಸಿದ್ದರಾಮಯ್ಯ ಶ್ರಮಿಸಿದ್ದಾರೆ. ಧರ್ಮದಲ್ಲಿ ರಾಜಕಾರಣ ಮಾಡಬಾರದು. ಧಾರ್ಮಿಕ ವಿಚಾರ ಮುಂದಿಟ್ಟುಕೊಂಡು ಮತ ಕೇಳಬಾರದು. ಧರ್ಮ ಕಟ್ಟಲು ಮಠಾಧೀಶರು, ಸಂತರು ಇದ್ದಾರೆ. ರಾಜಕಾರಣಿಗಳು ಉತ್ತಮ ಆಡಳಿತ ನೀಡುವತ್ತ ಗಮನಹರಿಸಬೇಕು ಎಂದು ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಗ್ರಾಮೀಣಾಭಿವೃದ್ಧಿ ವಿವಿ ಕುಲಪತಿ ವಿಷ್ಣುಕಾಂತ ಚಟಪಲ್ಲಿ ಮಾತನಾಡಿ, ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಇಂತಹ ಕಾರ್ಯಕ್ರಮಕ್ಕೆ ಸಮುದಾಯದ, ಸರ್ಕಾರದ ಸಹಕಾರ ಅಗತ್ಯವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕುರುಬರ ಸಂಘದ ಜಿಲ್ಲಾಧ್ಯಕ್ಷ ಫಕ್ಕೀರಪ್ಪ ಹೆಬಸೂರ ಮಾತನಾಡಿ, ಸಮಾಜದಲ್ಲಿ ಶೈಕ್ಷಣಿಕ ಅಭಿವೃದ್ಧಿಗಾಗಿ ಪ್ರತಿವರ್ಷ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ಜಿಲ್ಲೆಯ ಕುರುಬ ಸಮಾಜದ ವಿದ್ಯಾರ್ಥಿಗಳಿಗೆ ಶಿಷ್ಯವೇತನ ನೀಡುತ್ತ, ಸಮಾಜವನ್ನು ಸಂಘಟಿಸುತ್ತ ಬಂದಿದೆ. ಇದರ ಸದುಪಯೋಗವನ್ನು ಸಮಾಜ ಬಾಂಧವರು ಪಡೆದುಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪ್ರತಿಭಾನ್ವಿತ ಎಸ್ಸೆಸ್ಸೆಲ್ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ವತಿಯಿಂದ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಲಾಯಿತು. ಮಾಜಿ ಶಾಸಕ ಯತೀಂದ್ರ ಹಾಗೂ ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದಿಂದ ರಾಜ್ಯಪ್ರಶಸ್ತಿ ಪಡೆದ ವೆಂಕಟೇಶ ಇಮರಾಪೂರ, ಮಾಳಿಂಗರಾಯ ಪೂಜಾರ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕುಲಸಚಿವ ಬಸವರಾಜ ಲಕ್ಕಣ್ಣವರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರವಿ ಗುಂಜೀಕರ, ಧವನ ರಾಕೇಶ, ಶಶಿಧರ ರೊಳ್ಳಿ, ರಾಕೇಶ ಸಿದ್ದರಾಮಯ್ಯ ಟ್ರಸ್ಟ್ ಅಧ್ಯಕ್ಷ ರಾಮಕೃಷ್ಣ ರೊಳ್ಳಿ, ನಾಗಪ್ಪ ಗುಗ್ಗರಿ, ಚೆನ್ನಮ್ಮ ಹುಳಕಣ್ಣವರ, ಪ್ರಕಾಶ ಕರಿ, ಶೇಖಣ್ಣ ಕಾಳೆ ಮುಂತಾದವರು ಇದ್ದರು. ಪ್ರೊ. ಬಿ.ಆರ್. ಜಾಲಿಹಾಳ ಸ್ವಾಗತಿಸಿದರು. ಪ್ರೊ. ಮಾರುತಿ ಮಡ್ಡಿ ಕಾರ್ಯಕ್ರಮ ನಿರೂಪಿಸಿದರು.

# ಬಣಜಿಗರು ದುಡಿಮೆಯಲ್ಲಿ ಭಗವಂತನನ್ನು ಕಾಣುತ್ತಾರೆ



■ವಿಜಯಸಾಕ್ಷಿ ಸುದ್ದಿ, ರೋಣ

ಬಣಜಿಗ ಸಮುದಾಯದವರು ಬಸವಣ್ಣನ ಅನುವಾಯಿಗಳಾಗಿದ್ದು, ಬಣಜಿಗರಲ್ಲಿ ಜಾತಿ-ಧರ್ಮದ ತಾರತಮ್ಯವಿಲ್ಲ. ಎಲ್ಲರೂ ಒಂದೇ ಎಂದು ಸೌಹಾರ್ದತೆಯಿಂದ ಬಾಳುತ್ತಾರೆ ಎಂದು ಮೈಸೂರ ಮಠದ ವಿಜಯಮಹಾಂತ ಶ್ರೀಗಳು ಹೇಳಿದರು.

ಅವರು ಸೋಮವಾರ ಪಟ್ಟಣದ ಬಣಜಿಗ ಸಮುದಾಯದ ನೂತನ ಭವನ ಹಾಗೂ ಸಹಕಾರಿ ಸಂಘದ ಕಟ್ಟಡ ನಿರ್ಮಾಣದ ಭೂಮಿಪೂಜಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

12ನೇ ಶತಮಾನದಲ್ಲಿ ಬಸವಣ್ಣನವರ ಇಚ್ಛೆಯಂತೆ ಧಾರ್ಮಿಕ ಭಾವನೆಯಲ್ಲಿ ನಂಬಿಕೆಯನ್ನು ಹೊಂದಿರುವ ಬಣಜಿಗರು ದಾಸೋಹಿಗಳಾಗಿದ್ದಾರೆ. ವ್ಯಾಪಾರವೇ ತಮ್ಮ ಕಾಯಕ ಎಂದು ನಂಬಿಕೊಂಡು ತಮ್ಮ ದುಡಿಮೆಯಲ್ಲಿ ಭಗವಂತನನ್ನು ಕಾಣುತ್ತಾರೆ ಎಂದರು.

ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ ಮಾತನಾಡಿ, ಬಣಜಿಗರು ಶ್ರಮಜೀವಿಗಳು. ಸಮುದಾಯ ಭವನ ನಿರ್ಮಾಣದಿಂದ ಸಮಾಜ ಮತ್ತಷ್ಟು ಬೆಳೆದು ಸರ್ವ ಜನಾಂಗಕ್ಕೂ ಒಳಿತನ್ನು ಮಾಡಲಿ. ಅಲ್ಲದೆ ಸಮುದಾಯ ಭವನ ನಿರ್ಮಾಣದಿಂದ ಬಡವರಿಗೆ ಹೆಚ್ಚಿನ ಅನುಕೂಲವಾಗಲಿ ಎಂದ ಅವರು, ಸಮುದಾಯದವರು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆಯನ್ನು ನೀಡಿ ಎಂದರು.

ಅಧ್ಯಕ್ಷತೆಯನ್ನು ಮುತ್ತಣ್ಣ ಸಂಗಳದ ವಹಿಸಿದ್ದರು. ವೀರಣ್ಣ ಶೆಟ್ಟರ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಭೂದಾನಿಗಳಾದ ಮಾತೋಶ್ರೀ ಗುರುಬಸ್ಸಮ್ಮ ಐಹೊಳ್ಳಿ ಕುಟುಂಬಸ್ಥರನ್ನು ಸನ್ಮಾನಿಸಲಾಯಿತು.

ಮುಪ್ಪಿನಬಸವಲಿಂಗ ಶ್ರೀಗಳು, ಗುರುಪಾದೇಶ್ವರ ಶ್ರೀಗಳು, ಬೂದೇಶ್ವರ ಶ್ರೀಗಳು, ಗಂಗಾಧರೇಶ್ವರ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಮಾಜಿ ಸಭಾಪತಿ ವೀರಣ್ಣ ಮತ್ತಿಕಟ್ಟಿ, ಐ.ಎಸ್. ಪಾಟೀಲ, ಸಂಗನಗೌಡ ಪಾಟೀಲ, ಸಂಗಪ್ಪ ಮೆಣಸಿನಕಾಯಿ, ಮುತ್ತಣ್ಣ ಕಡಗದ, ರವಿ ಸಂಗನಬಶೆಟ್ಟರ, ಆನಂದ ಚಂಗಳಿ, ಶಿವಪ್ಪ ಹಾಲಬಾವಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka